ಸಂಪುಟ : 10 ಸಂಚಿಕೆ 15 ಪುಟ : 4+2 ಬೆಲೆ: 3.00 ಮಂಗಳವಾರ ಫೆಬ್ರವರಿ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 15 Pages : 4+2 Price : 3.00 Tuesday February 11 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಹಿರಿಯ ರಾಜ್ಯ ಉಪಾಧ್ಯಕ್ಷರಾಗಿ ರವಿ ಗುಂಜೀಕರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬೈಲಾ ನಿಯಮದ ಪ್ರಕಾರ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ. ಎಸ್. ಷಡಕ್ಷರಿ ಅವರು ರಾಜ್ಯ ಕಾರ್ಯಕಾರಿ ಸಮಿತಿಯ ನಿರ್ಣಯದಂತೆ ಗದಗ ಜಿಲ್ಲೆಯ ನೌಕರ ಸಂಘದ ಜಿಲ್ಲಾಧ್ಯಕ್ಷ ರಾದ ರವಿ ಗುಂಜೀಕರ ಅವರನ್ನು ರಾಜ್ಯ ಸಂಘದ ಹಿರಿಯ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಪ್ರಪ್ರಥಮ ಬಾರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕೇಂದ್ರದ ಪ್ರಮುಖ ಹುದ್ದೆಯನ್ನು ಅಲಂಕರಿಸಿರುವುದು ಇಲಾಖೆ ನೌಕರರಿಗೆ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಸಂಘದ ಕಾರ್ಯದರ್ಶಿ ಡಾ॥ ಬಸವರಾಜ ಬಳ್ಳಾರಿ, ರೋಣ ತಾಲೂಕಾ ಕಲ್ಯಾಣಾಧಿಕಾರಿಗಳಾದ ಎಂ. ಎಂ. ಹಣಸಿ ಹಾಗೂ ಸರ್ಕಾರಿ ನೌಕರ ಸಂಘದ ಎಲ್ಲಾ ಪದಾಧಿಕಾರಿಗಳು ಮತ್ತು ಸಮಸ್ತ ನೌಕರರ ಬಳಗ, ಶಿಕ್ಷಕರ ಬಳಗ ಅಭಿನಂದನೆ ಸಲ್ಲಿಸಿದ್ದಾರೆ.



ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ 33ನೇ ಪುಣ್ಯಸ್ಮರಣೆ ಅಂಗವಾಗಿ ನಗರದ ದಿ. ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲರು ಕೆ.ಎಚ್. ಪಾಟೀಲರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.



ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ 33ನೇ ಪುಣ್ಯಸ್ಮರಣೆ ಅಂಗವಾಗಿ ನಗರದ ದಿ. ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಅವರು ಕೆ.ಎಚ್. ಪಾಟೀಲರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ನಿಕಟಪೂರ್ವ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಇದ್ದರು.

### ಗದಗ ಜಿಲ್ಲಾಡಳಿತ ಭವನದಲ್ಲಿ ಕಾಯಕ ಶರಣರ ಜಯಂತಿಗೆ ವಿ.ಪ ಸದಸ್ಯ ಎಸ್.ವಿ. ಸಂಕನೂರ ಚಾಲನೆ

# ವಿಶ್ವಗುರು ಬಸವಣ್ಣನವರ ವಚನಗಳ ಪಾಲನೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವಗುರು ಬಸವಣ್ಣನವರ ಐಕ್ಯ ಕಾಯಕ ಶರಣರಾದ ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ ಹಾಗೂ ಶರಣ ಡೋಹರ ಕಕ್ಕಯ್ಯನವರು ಬಸವಣ್ಣನವರೊಂದಿಗೆ ಸಮ ಸಮಾಜ ನಿರ್ಮಾಣಕ್ಕಾಗಿ ಕಾಯಕನಿಷ್ಠರಾಗಿ ಶ್ರಮಿಸಿದ ಮಹನೀಯರು ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ ಹೇಳಿದರು.

ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಕಾಯಕ ಶರಣರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

> ಶರಣ ದೋಹರ ಕಕ್ಕಯ್ಯನವರು ಸೇರಿದಂತೆ ಬಸವಾದಿ ಶರಣರು ಮನುಕುಲೋದ್ಧಾರದ ಮಹಾಮಣಿಹದಲ್ಲಿ ತೊಡಗಿದ್ದರು. ಇದರ ಕೀರ್ತಿ ಎಲ್ಲ ಕಡೆ ಹಬ್ಬಿತು. ದೇಶದ ನಾನಾ ಕಡೆಯಿಂದ ಜನರ ಕಲ್ಯಾಣ ಪಟ್ಟಣಕ್ಕೆ ಬಂದು ಸೇರಿದರು. ಮಾಳವ ದೇಶದಿಂದ ಕಕ್ಕಯ್ಯ ಬಂದರು. ಕಕ್ಕಯ್ಯ ಚಂಡಾಲರಲ್ಲಿ ಒಂದು ಪಂಗಡವಾದ ಡೋಹರ ಪಂಗಡಕ್ಕೆ ಸೇರಿದವರು. ಚರ್ಮ ಹದ ಮಾಡುವುದು ಅವರ ವೃತ್ತಿ. ಅವರು ಬಸವಣ್ಣನವರು ಮತ್ತು ಮೊದಲಾದ ಶರಣರ ಆಚಾರ ವಿಚಾರಗಳಿಂದ ಪ್ರಭಾವಿತರಾದರು. ಅವರು ಲಿಂಗದೀಕ್ಷೆಯನ್ನು ಹೊಂದಿ ತನ್ನ ಆಚಾರ ಸಂಪನ್ನತೆಯಿಂದ ವೀರ ಮಹೇಶ್ವರನೆಂಬ ಹೆಗ್ಗಳಿಕೆಗೆ ಪಾತ್ರರಾದರು ಎಂದು ಪ್ರೊ. ಎನ್.ಎಂ. ಪವಾಡಿಗೌಡರ ತಿಳಿಸಿದರು.



ಬಸವಣ್ಣನವರು ಕಾಯಕ ತತ್ವ, ದಾಸೋಹ ತತ್ವದ ಮಹತ್ವವನ್ನು ಜಗತ್ತಿಗೆ ಸಾರಿದವರು. ದೇಶದ ಎಲ್ಲ ರಾಜ್ಯದವರು ಬಸವಣ್ಣನವರ ತತ್ವ ವಚನಗಳನ್ನ ಒಪ್ಪಿಕೊಂಡಿದ್ದಾರೆ. ದುಡಿದು ತಿನ್ನಬೇಕು, ದುಡಿದ ದುಡ್ಡಿನಿಂದ ಇನ್ನೊಬ್ಬರಿಗೂ ಹಂಚಿ ಜೀವನ ಸಾಗಿಸಬೇಕು ಎಂಬುದನ್ನು 12ನೇ ಶತಮಾನದಲ್ಲಿ ವಿಶ್ವಕ್ಕೆ ಸಾರಿದವರು ಬಸವಣ್ಣನವರು. ಅವರು ಕಾಯಕನಿಷ್ಠರು, ಸಮಾಜ ಸರಿದಾರಿಗೆ ತರುವಲ್ಲಿ ಇತರರಿಗೂ ಪ್ರೇರಣೆಯಾಗಿದ್ದಾರೆ ಎಂದು ಹೇಳಿದರು.

ಪ್ರಸ್ತುತ ಸಮಾಜಕ್ಕೆ ಬಸವಣ್ಣನವರ ಹಾಗೂ ಕಾಯಕ ಶರಣರ ವಚನಗಳು ಅಗತ್ಯವಾಗಿದ್ದು, ಬಸವಣ್ಣನವರ 'ಕಳಬೇಡ ಕೊಲಬೇಡ, ಹುಸಿಯ ನುಡಿಯಲು ಬೇಡ' ವಚನ ಎಲ್ಲರೂ ಪಾಲಿಸುವ ಮೂಲಕ ಮುನ್ನಡೆಯೋಣ ಎಂದು ಎಸ್.ವಿ. ಸಂಕನೂರ ತಿಳಿಸಿದರು.

ನಿವೃತ್ತ ಉಪನ್ಯಾಸಕ ಪ್ರೊ. ಸತೀಶ ಪಾಸಿ ಕಾಯಕ ಶರಣರ ಕುರಿತು ಉಪನ್ಯಾಸ ನೀಡುತ್ತಾ, 12ನೇ ಶತಮಾನದ ಶರಣರಲ್ಲಿ ಮಾದಾರ ಚೆನ್ನಯ್ಯ ಬಹು ಮುಖ್ಯವಾದ ವ್ಯಕ್ತಿ. ಸತ್ಯಶುದ್ಧ ಕಾಯಕಕ್ಕೆ ಹೆಸರಾದವರು. ತಮಿಳುನಾಡಿನ ಚೋಳರಾಜನ ಅರಮನೆಯ ಲಾಯಕ್ಕೆ ಹುಲ್ಲು ತರುವ ಕೆಲಸ ಮಾಡಿದರು. ಅನಂತರ ಅವರು ಬಸವಾದಿ ಶರಣರ ಆಚಾರ ವಿಚಾರಗಳಿಂದ ಪ್ರಭಾವಿತರಾಗಿ ಕಲ್ಯಾಣಕ್ಕೆ ಬಂದರು. ಅಲ್ಲಿ ತನ್ನ ಕುಲದ ಕಾಯಕವಾದ ಚರ್ಮವನ್ನು ಮುಂದುವರಿಸಿದರು. ದೇವನಿಗೆ ಅಂಬಲಿ ಉಣಿಸಿದ ಪ್ರಸಂಗ ಅವರ ಉಜ್ವಲ ಭಕ್ತಿಗೆ ಉದಾಹರಣೆಯಾಗಿದೆ ಎಂದರು.

ನಿವೃತ್ತ ಪ್ರಾಚಾರ್ಯ ಪ್ರೊ. ಎನ್.ಎಂ. ಪವಾಡಿಗೌಡರ ಕಾಯಕ ಶರಣರ ಕುರಿತು ಉಪನ್ಯಾಸ ನೀಡುತ್ತಾ, ಶರಣ ಸಮಗಾರ ಹರಳಯ್ಯನವರು ತಮ್ಮ ಕುಲ ಕಸುಬಾದ ಜೋಡಿ (ಪಾದರಕ್ಷೆ) ತಯಾರಿಕೆಯಲ್ಲಿ ತೊಡಗಿದ್ದರು. ಹರಳಯ್ಯನವರು ತಯಾರಿಸಿದ ಚಮ್ಮಾವುಗೆಗಳನ್ನು ಒಯ್ದು ಬಸವಣ್ಣನವರಿಗೆ ಕೊಟ್ಟಾಗ, ಅವರು ಭಾವಪರವಶರಾಗಿ, ಅವರನ್ನು ಮೆಟ್ಟಿಕೊಳ್ಳದೆ ಭಯ ಭಕ್ತಿಯಿಂದ, ತಮ್ಮ ತಲೆಯ ಮೇಲೆ ಇಟ್ಟುಕೊಂಡು, 'ಇವು ದೇವರ ಪಾದರಕ್ಷೆಗಳು' ಎಂದರು. ಈ ಪವಿತ್ರ ಚಮ್ಮಾವುಗೆಗಳನ್ನು ಮೆಡುವ ಯೋಗ್ಯತೆ, ಕೂಡಲ ಸಂಗಮನಿಗಲ್ಲದೆ ನನಗೆ ಸಲ್ಲವು ಎಂದು ನುಡಿದಾಗ, ಹರಳಯ್ಯನವರು ಬಸಣ್ಣನವರ ಕಿಂಕರತ್ವವನ್ನು ಮನದಲ್ಲೇ ಕೊಂಡಾಡಿದರು ಎಂದು ಹೇಳಿದರು.

> ಜಗಜ್ಯೋತಿ ಬಸವಣ್ಣನವರ ತತ್ವಗಳು, ವಚನಗಳು ದೇಶದ ಸಂವಿಧಾನ ರಚಿಸುವಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಸ್ಫೂರ್ತಿದಾಯಕವಾದವು. ಸಂವಿಧಾನ ರಚನೆಯಾಗಿ 75 ವರ್ಷಗಳು ಸಂದಿದ್ದು, ಪ್ರಸ್ತುತ ಸಮಾಜಕ್ಕೆ ಬಸವಣ್ಣನವರ ತತ್ವ ಪಾಲನೆ ಅಗತ್ಯವಿದೆ.
> **– ಎಸ್.ವಿ. ಸಂಕನೂರ.**
> **ವಿ.ಪ ಸದಸ್ಯರು.**

ಕಾರ್ಯಕ್ರಮದ ವೇದಿಕೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಾಬರ್ಚಿ, ಎಸ್.ಎನ್. ಬಳ್ಳಾರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಪೊಲೀಸ್ ಇಲಾಖೆಯ ಡಿವೈಎಸ್‌ಪಿ ಇನಾಮ್ದಾರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ರವಿ ಗುಂಜಿಕರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಮುಂತಾದವರು ಹಾಜರಿದ್ದರು.

ವಚನ ಗಾಯನವನ್ನು ಮೃತ್ಯುಂಜಯ ಹಿರೇಮಠ ಹಾಗೂ ಸಂಗಡಿಗರು ನಡೆಸಿಕೊಟ್ಟರು. ಉಪನ್ಯಾಸಕ ಆರ್.ಬಿ. ಚಿನಿವಾಲರ್ ನಿರ್ವಹಿಸಿದರು.

### ಅಂತೂರ ಗ್ರಾ.ಪಂನಲ್ಲಿ ಉದ್ಯೋಗ ಖಾತರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ

# ಅತ್ಯುತ್ತಮ ಗ್ರಾಮ ಪಂಚಾಯಿತಿ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಪ್ರದೇಶದ ದುಡಿಯುವ ಕೈಗಳಿಗೆ ವರದಾನ ಎನಿಸಿರುವ ಮಹತ್ವಾಕಾಂಕ್ಷಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದ ಪರಿಣಾಮ ಗದಗ ತಾಲೂಕಿನ ಅಂತೂರ ಗ್ರಾಮ ಪಂಚಾಯಿತಿ ರಾಜ್ಯ ಮಟ್ಟದ ಅತ್ಯುತ್ತಮ ಗ್ರಾಮ ಪಂಚಾಯಿತಿ ಪುರಸ್ಕಾರ ಮುಡಿಗೇರಿಸಿಕೊಂಡಿದೆ.

2023-24ರ ಉದ್ಯೋಗ ಖಾತರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಮತ್ತು ಕಾಮಗಾರಿಗಳ ಪ್ರಗತಿ ಆಧಾರದ ಮೇಲೆ ತಾಲೂಕಿನ ಅಂತೂರ ಗ್ರಾ.ಪಂಗೆ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದೆ. ಇದರೊಂದಿಗೆ ನರೇಗಾ ಯೋಜನೆಯ ಎಲ್ಲ ವಿಭಾಗಗಳಲ್ಲೂ ಗಣನೀಯ ಸಾಧನೆಗೈದ ಅಂತೂರ ಗ್ರಾ.ಪಂ ಜನಸ್ನೇಹಿಯಾಗಿ ಹೊರಹೊಮ್ಮಿ ಇತರೆ ಪಂಚಾಯಿತಿಗಳಿಗೆ ಮಾದರಿಯಾಗಿದೆ.

ಅತ್ಯುತ್ತಮ ಗ್ರಾ.ಪಂ ಪ್ರಶಸ್ತಿಗೆ ಆಯ್ಕೆಯಾಗಿರುವ ಅಂತೂರ ಅಭಿವೃದ್ಧಿ ಕಾರ್ಯಗಳಿಗೆ ಮುನ್ನುಡಿ ಬರೆದಿದೆ. ಈ ಕಾಲಾವಧಿಯಲ್ಲಿ ನಿಗದಿತ ಗುರಿಗಿಂತ ಹೆಚ್ಚಿನ ಸಾಧನೆ ಮಾಡುವಲ್ಲಿ ಗ್ರಾ.ಪಂ ಆಡಳಿತ ಮಂಡಳಿ, ಅಧಿಕಾರಿ-ಸಿಬ್ಬಂದಿ ವರ್ಗ ಸಮರ್ಪಕವಾಗಿ ಕಾರ್ಯ ನಿರ್ವಹಿಸಿದ ಪರಿಣಾಮ ಪ್ರಶಸ್ತಿ ಲಭಿಸಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯ ಹಿರಿಮೆ ಹೆಚ್ಚಿಸುವಲ್ಲಿ ಅಂತೂರ ಸಫಲತೆ ಕಂಡಿದ್ದು, ನಾಡಿನ ಗಮನ ಸೆಳೆದಿದೆ.




ನರೇಗಾ ಯೋಜನೆ ಮಾನವ ದಿನಗಳ ಸೃಜನೆ, ನೊಂದಾಯಿತ ಕೂಲಿಕಾರರಿಗೆ ಕೆಲಸ ನೀಡುವಿಕೆ, ಕಾಮಗಾರಿಗಳ ಸೃಜನೆ ಮತ್ತು ಮುಕ್ತಾಯಗೊಳಿಸುವಿಕೆ, ವಿನೂತನ ಕಾಮಗಾರಿ ಅನುಷ್ಠಾನ, ಸಾಮಾಜಿಕ ಪರಿಶೋಧನೆ, ಆಕ್ಷೇಪಣೆ, ವಿಲೇವಾರಿ, ಆಡಾಕ್ ಸಮಿತಿ ಸಭೆಗೆ ಪೂದಕ ದಾಖಲೆಗಳನ್ನು ಒದಗಿಸಿ ಇತ್ಯರ್ಥ ಪಡಿಸಿರುವುದು, ಜಲ ಸಂರಕ್ಷಣೆ, ನೈಸರ್ಗಿಕ ನಿರ್ವಹಣೆಯ ಮಾನದಂಡದ ಅನುಸಾರ ಅಂತೂರ ಗ್ರಾ.ಪಂನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಯುಕ್ತರು ಆದೇಶ ಹೊರಡಿಸಿದ್ದಾರೆ.

> ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ನರೇಗಾ ಹಬ್ಬ-2025ರ ಕಾರ್ಯಕ್ರಮದಲ್ಲಿ ಅಂತೂರ ಗ್ರಾಮ ಪಂಚಾಯಿತಿಗೆ ಇಲಾಖೆಯ ಸಚಿವರಾದ ಪ್ರಿಯಾಂಕ ಖರ್ಗೆ ಹಾಜರಿದ್ದ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಉದ್ಯೋಗ ಖಾತರಿ ಯೋಜನೆ ಅಂತೂರಲ್ಲಿ ಕೇವಲ ಘೋಷಣೆಯಾಗಿ ಉಳಿದಿಲ್ಲ. ಇಲ್ಲಿ ನಿಜವಾಗಿಯೂ ಕಾರ್ಯರೂಪಕ್ಕೆ ಬಂದಿದ್ದು, ಅನೇಕ ವೈಯಕ್ತಿಕ, ಸಮುದಾಯ, ಶಾಲಾ ಸಂಬಂಧಿತ ಕಾಮಗಾರಿಗಳೂ ಸೇರಿದಂತೆ ವಿನೂತನ ಕಾಮಗಾರಿಗಳೂ ಸಹ ಆಗಿವೆ. ಇದರಿಂದ ಯೋಜನೆಗೆ ಮತ್ತಷ್ಟು ಮಹತ್ವ ಬಂದಂತಾಗಿದೆ.

# ಅರ್ಥಪೂರ್ಣ ಆಚರಣೆಗೆ ಸಿದ್ಧತೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಫೆ.15ರಂದು ಜರುಗಲಿರುವ ಸಂತ ಶ್ರೀ ಸೇವಾಲ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ತಾಲೂಕಾಡಳಿತದಿಂದ ಕ್ರಮ ವಹಿಸಲಾಗುವುದು ಎಂದು ತಹಸೀಲ್ದಾರ ಅನಿಲ ಬಡಿಗೇರ ತಿಳಿಸಿದರು.

ಅವರು ಸೋಮವಾರ ತಹಸೀಲ್ದಾರ ಕಚೇರಿಯಲ್ಲಿ ಶ್ರೀ ಸಂತ ಸೇವಾಲಾಲ ಜಯಂತಿ ಆಚರಣೆಯ ಪ್ರಯುಕ್ತ ಕರೆದಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಫೆ.15ರಂದು ತಹಸೀಲ್ದಾರ ಕಚೇರಿ ಸೇರಿದಂತೆ ಎಲ್ಲ ಇಲಾಖೆಗಳಲ್ಲಿ ಸರಕಾರದ ನಿಯಮಾನುಸಾರ ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಜಯಂತಿ ಆಚರಣೆಯನ್ನು ಮಾಡಬೇಕು. ತಹಸೀಲ್ದಾರ ಕಚೇರಿಯಲ್ಲಿ ಜರುಗುವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಮುಖಂಡರು ಆಗಮಿಸಿ ಜಯಂತಿಯನ್ನು ಯಶಸ್ವಿಗೊಳಿಸಬೇಕು. ಸಭೆಗೆ ಗೈರು ಉಳಿದವರಿಗೆ ನೋಟೀಸ್ ಜಾರಿ ಮಾಡಲಾಗುವುದು ಎಂದರು.

ಸಮಾಜದ ಮುಖಂಡರಾದ ಎಂ.ಕೆ. ಲಮಾಣಿ, ಜಾನು ಲಮಾಣಿ, ದೇವಪ್ಪ ಲಮಾಣಿ ಮಾತನಾಡಿ, ಸರಕಾರದ ನಿರ್ದೇಶನದಂತೆ ಫೆ.15ರಂದು ಎಲ್ಲ ಸರಕಾರಿ ಕಚೇರಿಗಳಲ್ಲಿ ಮತ್ತು ಶಾಲಾ-ಕಾಲೇಜುಗಳಲ್ಲಿ ಜಯಂತಿ ಆಚರಣೆ ಮಾಡಲಾಗುವುದು. ತದನಂತರ ಸಮಾಜದ ವತಿಯಿಂದ ಅದ್ದೂರಿಯಾಗಿ ಜಯಂತಿ ಆಚರಣೆ ಮಾಡಲಾಗುವುದು ಎಂದರು.

ವಲಯ ಅರಣ್ಯಾಧಿಕಾರಿ ರಾಮಪ್ಪ ಪೂಜಾರ, ಪಿಆರ್‌ಇಡಿ ಮಾರುತಿ ರಾಠೋಡ, ಬಿಇಓ ನಾಯ್ಕ, ಎಡಿಎ ರೇವಣೆಪ್ಪ ಮನಗೂಳಿ, ಸಮಾಜ ಕಲ್ಯಾಣಾಧಿಕಾರಿ ಗೋಪಾಲ ನಾಯ್ಕ, ಬಿಸಿಎಂನ ಮರಿಗೌಡ ಸುರಕೋಡ, ಈರಣ್ಣ ಚವ್ಹಾಣ, ಎಚ್.ಎಸ್. ರಾಮನಗೌಡ, ಲಕ್ಷ್ಮಣ ಲಮಾಣಿ, ತಿಪ್ಪಣ್ಣ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

### ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಪ್ರಯುಕ್ತ ಅಧಿಕಾರಿಗಳಿಗೆ ಕಾರ್ಯಾಗಾರ

# ನಾವೆಲ್ಲರೂ ಸೇರಿ ಮಾನವೀಯತೆ ಉಳಿಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಮಾನವ ಕಳ್ಳಸಾಗಾಣಿಕೆ ಹಾಗೂ ಜೀತ ಕಾರ್ಮಿಕ ಪದ್ಧತಿ ಒಂದು ಅಪರಾಧ. ಇದನ್ನು ಬುಡಸಮೇತ ಕಿತ್ತೊಗೆಯಲು ಎಲ್ಲರೂ ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಗದಗ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಪ್ರಯುಕ್ತ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಮನುಷ್ಯತ್ವವನ್ನು ಎತ್ತಿ ಹಿಡಿಯಬೇಕಿದೆ. ದಬ್ಬಾಳಿಕೆ ಸತತವಾಗಿ ನಡೆದರೆ ಅದು ಜೀತ ಪದ್ಧತಿ ಎನಿಸಿಕೊಳ್ಳುತ್ತದೆ. ಮಾನವೀಯತೆಯನ್ನು ನಾವು-ನೀವೆಲ್ಲರೂ ಸೇರಿ ಉಳಿಸೋಣ.




ಅದಕ್ಕೆ ಎಲ್ಲರೂ ಪ್ರತಿಜ್ಞೆ ಮಾಡೋಣ, ಪ್ರತಿಜ್ಞೆಯ ಫಲವನ್ನು ನಾವು ಎಲ್ಲರೂ ಕಾರ್ಯರೂಪಕ್ಕೆ ತರೋಣ ಎಂದು ಹೇಳಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ ಮಾತನಾಡಿ, ಜೀತ ಪದ್ಧತಿ ಎಂದರೆ ಅಲ್ಪ ಪ್ರಮಾಣದ ಸಾಲ ಪಡೆದು ಹಣವನ್ನು ತೀರಿಸಿಕೊಳ್ಳವುದಕ್ಕೆ ಅವರನ್ನು ಮತ್ತೊಬ್ಬರ ಮನೆಯಲ್ಲಿ ದುಡಿಸಿಕೊಳ್ಳುತ್ತಿದ್ದರು. ಆರ್ಟಿಕಲ್ 21ರ ಪ್ರಕಾರ ಅವರನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ದುಡಿಸಿಕೊಂಡು ಕಡಿಮೆ ಕೂಲಿ ಪಾವತಿಸುವುದು ಮತ್ತು 1975 ಅಬಾಲಿಷನ್ ಆ್ಯಕ್ಟ್ ಬಂದಿತು. ಈ ಆ್ಯಕ್ಟ್ ಬಂದ ನಂತರ ಈ ರೀತಿ ಶಿಕ್ಷಿಸುವಂತೆ ಪ್ರಕ್ರಿಯೆ ಬಂದಿದೆ. ಇದರಲ್ಲಿ ಜಿಲ್ಲಾಧಿಕಾರಿಗಳು ದಂಡ ವಿದಿಸುವುದಲ್ಲದೆ ಆ್ಯಕ್ಟ್ 16ರ ಪ್ರಕಾರ ಜೈಲು ಶಿಕ್ಷೆಯನ್ನು ವಿಧಿಸಬಹುದು. 13 ಆ್ಯಕ್ಟ್ ಪ್ರಕಾರ ವಿಚಾರಣೆ ಇರುತ್ತದೆ. ಇದರಲ್ಲಿ ಹಿಂದುಳಿದ ವರ್ಗಗಳ ಇಲಾಖೆ ಸದಸ್ಯರು, ಸಾಮಾಜಿಕ ಕಾರ್ಯಕರ್ತರು ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸದಸ್ಯರು ಇರುತ್ತಾರೆ ಎಂದು ಹೇಳಿದರು.

> ಪ್ರತಿವರ್ಷ ನಮ್ಮ ದೇಶದಲ್ಲಿ ಫೆಬ್ರವರಿ 9ರಂದು ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆಯನ್ನು ಆಚರಿಸುತ್ತಾ ಬಂದಿದ್ದೇವೆ. ಬಹಳ ವರ್ಷಗಳ ಹಿಂದೆ ಜೀತ ಪದ್ಧತಿ ಹೆಚ್ಚು ಆಚರಣೆಯಲ್ಲಿತ್ತು. ಕಠಿಣ ಕಾನೂನು ಜಾರಿಗೊಳಿಸಿದ ನಂತರದ ದಿನಗಳಲ್ಲಿ ಇದು ಕ್ರಮೇಣ ಕಡಿಮೆ ಆಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ್ ಸೋಮನಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಕೃಷಿ, ಕೈಗಾರಿಕೆಗಳಲ್ಲಿ, ಹೋಟಲ್, ಫ್ಯಾಕ್ಟರಿ ಮುಂತಾದವುಗಳಲ್ಲಿ ಒತ್ತಾಯಪೂರ್ವಕವಾಗಿ ಹೆಚ್ಚಿನ ಸಮಯ ಕೆಲಸವನ್ನು ಮಾಡಿಸಿಕೊಂಡು, ಕಡಿಮೆ ಸಂಬಳ ನೀಡಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ರವಿ ಗುಂಜಿಕರ್, ಡಿವೈಎಸ್‌ಪಿ ಇನಾಮದಾರ, ಕಾರ್ಮಿಕ ಇಲಾಖೆಯ ಸಂದೇಶ ಪಾಟೀಲ, ಸ್ಪಂದನಾ ಸ್ವಯಂ ಸೇವಾ ಸಂಸ್ಥೆಯ ಸುಶೀಲಾ, ಐಜೆಎಂ ಸಂಸ್ಥೆಯ ಪದಾಧಿಕಾರಿಗಳು ಇದ್ದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣಾ ಎಂ ಸ್ವಾಗತಿಸಿದರು, ಸಿದ್ಧಲಿಂಗೇಶ್ವರ ಪ್ರೌಢಶಾಲಾ ವಿದ್ಯಾರ್ಥಿಗಳು ಪ್ರಾರ್ಥನೆ ಗೀತೆ ಹಾಡಿದರು.

## ಸಂಪಾದಕೀಯ

# ನಕ್ಸಲರ ಹತ್ಯೆ ಪರಿಹಾರವಲ್ಲ

ಛತ್ತೀಸಗಢದಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ 31 ಜನ ನಕ್ಸಲಿಯರು ಹತರಾಗಿದ್ದಾರೆ. ಒಟ್ಟಾರೆ ಒಂದೇ ವರ್ಷದಲ್ಲಿ 81 ಜನ ನಕ್ಸಲಿಯರನ್ನು ಪೊಲೀಸರು ಹತ್ಯೆ ಮಾಡಿದ್ದಾರೆ. ಆ ಮೂಲಕ ಸಶಸ್ತ್ರ ಹೋರಾಟವನ್ನು ಕೊನೆಗಾಣಿಸುವ ಇಂಗಿತ ವ್ಯಕ್ತಪಡಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, 2026ರ ಒಳಗಾಗಿ ನಕ್ಸಲ್ ಮುಕ್ತ ಭಾರತ ಮಾಡುವುದಾಗಿ ಹೇಳಿಕೆ ನೀಡಿದ್ದಾರೆ.

ಅಮಿತ್ ಶಾ ಅವರಿಗೆ ನಿಜವಾಗಿಯೂ ನಕ್ಸಲ್ ಮುಕ್ತ ಭಾರತ ಮಾಡುವ ಚಿಂತನೆ ಇದ್ದರೆ ಮೊದಲು ನಕ್ಸಲ್ ಹೋರಾಟದ ಹಿನ್ನೆಲೆ ಅರ್ಥ ಮಾಡಿಕೊಳ್ಳಬೇಕು. ಯಾವ ಕಾರಣಕ್ಕಾಗಿ, ಯಾವ ದೌರ್ಜನ್ಯಕ್ಕಾಗಿ, ಯಾವ ಭೂಮಿಯ ರಕ್ಷಣೆದಾಗಿ ನಾಡು ಬಿಟ್ಟು ಶಸ್ತ್ರ ಹಿಡಿದು ಕಾಡು ಹಾದಿ ಹಿಡಿದರು ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ನಕ್ಸಲರ ಸಮಸ್ಯೆ ಜನರ ಸಮಸ್ಯೆ. ಅದನ್ನು ಪರಿಹಾರ ಮಾಡುವ ನಿಟ್ಟಿನಲ್ಲಿ ಕೆಲಸ ಆರಂಭಿಸಿದಾಗ ಮಾತ್ರ ದೇಶದಲ್ಲಿ ನಕ್ಸಲಿಸಂ ತಾನಾಗಿಯೇ ಮುಕ್ತವಾಗುತ್ತದೆ.

ಕೇವಲ ಸಶಸ್ತ್ರ ಹೋರಾಟದ ಹಿಂದಿನ ಉದ್ದೇಶ ಮಾತ್ರವಲ್ಲ, ಜನಪರ ಹೋರಾಟದ ಧ್ವನಿಗಳನ್ನು ಅಮಿತ್ ಶಾ ಆಲಿಸಿ, ಅವುಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ಕೆಲಸ ಮಾಡಿದರೆ, ಯಾರೊಬ್ಬರೂ ನಕ್ಸಲ್ ಹೋರಾಟಕ್ಕೆ ಧುಮುಕುವುದಿಲ್ಲ. ಸಶಸ್ತ್ರ ಹೋರಾಟವನ್ನು ಸಶಕ್ತ ಆಡಳಿತದಿಂದ ಕೊನೆಗಾಣಿಸಲು ಸಾಧ್ಯವಿದೆ. ಆ ನಿಟ್ಟಿನಲ್ಲಿ ನಕ್ಸಲ್ ಪೀಡಿತ ರಾಜ್ಯಗಳು, ಕೇಂದ್ರ ಸರಕಾರ ಚಿಂತನೆ ನಡೆಸಬೇಕು.

# ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆ.11ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 22 – ಗಂಗಿಮಡಿ, ಲೀಡ್ಕರ್ ಬಡಾವಣೆ. ವಾರ್ಡ್ ನಂ. 11 – ನಿಸರ್ಗ ಬಡಾವಣೆ, ರಿಂಗ್ ರೋಡ್, ಶಿವ ಬಸವನಗರ, ಗಣಪತಿ ಕಟ್ಟಿ, ಹನುಮಂತ ದೇವರ ಗುಡಿ, ಗಾಣಿಗೇರ ಭವನ, ಅಬ್ದುಲ್ ಕಲಾಂ ರೋಡ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 3 – ಮಿಷನ್ ಕಾಂಪೌಂಡ್ ಎರಡು ಭಾಗಗಳು, ಬಣ್ಣದ ನಗರ ಪೂರ್ತಿ ಭಾಗಗಳು, ಕುಂಬಾರ ಓಣಿ, ರಾಜಾಜಿ ರಸ್ತೆ, ಅಯ್ಯಪ್ಪನ ಗದ್ದುಗೆ, ಮೆಂಬರ್ ಸರ್ ಲೈನ್, ಕಬಾಡೆಯವರ ಲೈನ್, ಹುಯಿಲಗೋಳ ರಸ್ತೆ ಎಡಭಾಗ ಪೂರ್ತಿ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20, 25, 23 – ಬೇವಿನಮರದಮ್ಮ, ಹುಲಿಗೆಮ್ಮನ ಗುಡಿ, ಎಸ್ ಟಿ ಡಿ, ಕೊಟ್ಟೂರವರ ಲೈನ್, ಕೆರೆಕಲಮಟ್ಟಿ, ಸಿಟಿ ಹಾಲ್ 2 ಭಾಗ, ಸೋಮೇಶ್ವರ ಗುಡಿ, ಕಲಬಂಡಿಯವರ ಲೈನ್, ಹಾಳದಿಬ್ಬ, 2 ನಂ. ಶಾಲೆ, ಪಲ್ಲೇದವರ ಲೈನ್, ಖಾನ ತೋಟ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 12, 13 – ಸಂಜೀವಿನಿ ಆಸ್ಪತ್ರೆ ಲೈನ್, ಭಾಗಮಾರ್, ಹೊಂಬಳದವರ ಲೈನ್, ಸಾಯಿನಾಥ ಗುಡಿ, ಗರಗದವರ ಲೈನ್, ನಾವಳ್ಳಿ ಅವರ ಲೈನ್, ಕೊಳಚೆ ಪ್ರದೇಶ, ಕುಲಕರ್ಣಿಯವರ 1,2 ನೇ ಕ್ರಾಸ್, ಇಟಗಿಯವರ ಲೈನ್, ಕೊಟ್ಟೂರವರ ಲೈನ್, ಗುಳೇದವರ ಲೈನ್, ಈದ್ಗಾ ಕಾಂಪ್ಲೆಕ್ಸ್, ಗಣೇಶ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34 – ಹುಡ್ಕೋ ಕೆಲವು ಭಾಗಗಳು, ವಡ್ಡರಗೇರಿ, ಕೊರವರ ಓಣಿ, 46 ಪ್ಲಾಟ್, ಮೂರು ಶಿಳ್ಳಿನ ವಕಾರ, ಬಸವೇಶ್ವರ ಶಾಲೆ, 1ನೇ ಕ್ರಾಸ್, 2ನೇ ಕ್ರಾಸ್ ಉಳಿದ ಕೆಲವು ಭಾಗಗಳು.

ಪ್ರಕಟಣೆ: ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಓದು ಕಾರ್ಯಕ್ರಮ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬೆಟಗೇರಿ ಆದರ್ಶ ಶಿಕ್ಷಣ ಸಮಿತಿಯ ವಾಣಿಜ್ಯ ಮಹಾವಿದ್ಯಾಲಯ ಸಹಯೋಗದಲ್ಲಿ ಫೆಬ್ರವರಿ 12 ರಂದು ಬೆಳಿಗ್ಗೆ 11 ಗಂಟೆಗೆ ಬೆಟಗೇರಿ ಆದರ್ಶ ಶಿಕ್ಷಣ ಸಮಿತಿಯ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಭಾರತರತ್ನ ಡಾ. ಬಿ. ಆರ್. ಅಂಬೇಡ್ಕರ್ ಓದು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಆದರ್ಶ ಶಿಕ್ಷಣ ಸಮಿತಿ ಅಧ್ಯಕ್ಷ ಕೆ. ವಿ. ಕುಷ್ಟಗಿ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತದಾರ, ಜಿಲ್ಲಾ ವಾರ್ತಾಧಿಕಾರಿ ವಸಂತ ಬಿ ಮಡ್ಲೂರ, ವಾಣಿಜ್ಯ ಮಹಾವಿದ್ಯಾಲಯ ಪ್ರಾಚಾರ್ಯ ಪ್ರೊ. ಕೆ. ಗಿರಿರಾಜ ಕುಮಾರ್, ಐಕ್ಯೂಎಸಿ ಕೋಆರ್ಡಿನೇಟರ್ ಡಾ.ವಿ. ಟಿ. ನಾಯ್ಕರ್ ಪಾಲ್ಗೊಳ್ಳುವರು.

ಹುಲಕೋಟಿ ಜಿಸಿಟಿಎಂ ಪದವಿ ಪೂರ್ವ ಕಾಲೇಜು ಉಪನ್ಯಾಸಕ ಡಾ. ಅರ್ಜುನ ಗೊಳಸಂಗಿ ಅವರು ವಿಶೇಷ ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ.ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ, ಫೆ.12ರಂದು ಗದುಗಿನ ಆಧ್ಯಾತ್ಮ ವಿದ್ಯಾಶ್ರಮದ ಶ್ರೀ ಆದಿಶಕ್ತಿ ಮಹಾರಥೋತ್ಸವದ ನಿಮಿತ್ತ ಲೇಖನ

# ಆಧ್ಯಾತ್ಮಿಕ ಮಹಾಬೆಳಕು ಡಾ. ನೀಲಮ್ಮ ತಾಯಿ

12ನೇ ಶತಮಾನದ ಶಿವಶರಣರಲ್ಲಿ 'ಆಧ್ಯಾತ್ಮಿಕ ಕ್ಷೇತ್ರದ ಧ್ರುವತಾರೆ' ಎನಿಸಿಕೊಂಡ ದಿಟ್ಟತನದ ವ್ಯಕ್ತಿತ್ವದ ಶಿವಶರಣೆ ಅಕ್ಕಮಹಾದೇವಿಯವರು. ಇಡೀ ಮಹಿಳಾ ಸಂಕುಲಕ್ಕೆ ಮಾದರಿಯಾದವರು. ಕದಳಿಯ ಕರ್ಪೂರವಾಗಿ, ತಮ್ಮ ಅನುಭಾವದ ವಚನಗಳ ಮೂಲಕ ಜನಮಾನಸದಲ್ಲಿ ಅಂತರಾಳದ ಅರಿವನ್ನುಂಟು ಮಾಡಿದವರು. ಅಂತಹದೇ ಆಧ್ಯಾತ್ಮಿಕ ಒಲವನ್ನು ಹೊಂದಿದ, ಈ ನಾಡಿನ ಆಧ್ಯಾತ್ಮಿಕ ಮಹಾ ಬೆಳಕಾದವರು, ಗದುಗಿನ ಆಧ್ಯಾತ್ಮ ವಿದ್ಯಾಶ್ರಮದ ಪೂಜ್ಯ ಶ್ರೀ ಶಿವಶರಣೆ ನೀಲಮ್ಮ ತಾಯಿಯವರು.

ಪ್ರತಿವರ್ಷ ಭಾರತ ಹುಣ್ಣಿಮೆಯ ದಿನದಂದು ಆಧ್ಯಾತ್ಮ ವಿದ್ಯಾಶ್ರಮದ ಶ್ರೀ ಆದಿಶಕ್ತಿ ಮಹಾರಥೋತ್ಸವ, ಸತ್ಸಂಗ, ಹಾಗೂ ಶ್ರೀ ಜಗದ್ಗುರು ಸದಾಶಿವಾನಂದ ಗುರುಗಳವರ ಜಯಂತ್ಯುತ್ಸವ ನೆರವೇರುವುದು. ಗದುಗಿನ ಪುಣ್ಯಭೂಮಿ ಅನೇಕ ಸಾಧು-ಸಂತರ ಶಿವಶರಣರ ಆಧ್ಯಾತ್ಮಿಕ ನೆಲೆಬೀಡು. ಮನುಷ್ಯ ಲೌಕಿಕ ಜೀವನದ ಜಂಜಡಗಳನ್ನು ಕ್ಷಣಕಾಲವಾದರೂ ಬದಿಗಿಟ್ಟು ಸತ್ಸಂಗಗಳಲ್ಲಿ, ಆಧ್ಯಾತ್ಮಿಕ ಚಿಂತನೆಯ ಸಭೆ-ಸಮಾರಂಭಗಳಲ್ಲಿ ತನ್ನನ್ನು ತೊಡಗಿಸಿಕೊಳ್ಳುವ ಮೂಲಕ, ಇಂತಹ ಮಹನೀಯರ ಆಧ್ಯಾತ್ಮಿಕ ಅರಿವಿನ ಚಿಂತನೆಯನ್ನು ಅರ್ಥೈಸಿಕೊಂಡಾಗ ಮನುಷ್ಯ ಜೀವನ ಸಾರ್ಥಕತೆಯ ಹಾದಿಯಲ್ಲಿ ಸಾಗುತ್ತದೆ. ಇದಕ್ಕೆ ಪೂರಕವೆಂಬಂತೆ ಆಧ್ಯಾತ್ಮಿಕ ಪರಿಸರವನ್ನು ಗದುಗಿನ ಪುಣ್ಯಭೂಮಿಯಲ್ಲಿ ನಿರ್ಮಾಣ ಮಾಡುವ ಮೂಲಕ ಯಾವುದೇ ಜಾತಿ-ಮತ-ಭೇದ ಭಾವಗಳಿಲ್ಲದೆ ಸರ್ವರಿಗೂ ಸಮಾನತೆಯ ದೃಷ್ಟಿಯನ್ನು ಹೊಂದಿ, ನೀಲಮ್ಮ ತಾಯಿಯವರ ಆಧ್ಯಾತ್ಮ ವಿದ್ಯಾಶ್ರಮ ಭಕ್ತಿ ಭಾವಗಳ ಸಂಗಮವಾಗಿದೆ.

ಧಾರವಾಡ ಜಿಲ್ಲೆ ನವಲಗುಂದ ತಾಲೂಕಿನ ಶಿಶ್ವಿನಹಳ್ಳಿ ಗ್ರಾಮದ ವೀರಶೈವ ಮನೆತನದಲ್ಲಿ ಕೃಷಿ ಕಾಯಕ ನಿಷ್ಠರಾಗಿದ್ದ ಶ್ರೀ ಯಲ್ಲಪ್ಪ ಹಾಗೂ ಸಂಗಮ್ಮ ನವರ ಪುಣ್ಯ ಗರ್ಭದಲ್ಲಿ ಜನಿಸಿದ ನೀಲಮ್ಮ ತಾಯಿಯವರು ಬಾಲ್ಯದಿಂದಲೂ ಆಧ್ಯಾತ್ಮಿಕ ಸೆಳೆತವನ್ನು ಹೊಂದಿದ್ದರು. ತಮ್ಮ ಪ್ರಾಥಮಿಕ ಶಿಕ್ಷಣವನ್ನು ಹಾಗೂ ಮಾಧ್ಯಮಿಕ ಶಿಕ್ಷಣವನ್ನು ಮುಗಿಸಿದ ನಂತರ ಮನೆಯಲ್ಲಿ ಮದುವೆಯ ಪ್ರಸ್ತಾಪ ಪ್ರಾರಂಭವಾಯಿತು. ಆದರೆ ನೀಲಮ್ಮ ತಾಯಿಯವರಲ್ಲಿ ಐಹಿಕ ಜೀವನದ ವೈರಾಗ್ಯ ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಹೋಯಿತು. ಅಕ್ಕಮಹಾದೇವಿಯವರಂತೆ ವೀರ ವಿರಾಗಿಣಿಯಾಗಿ ತಮ್ಮ ಬದುಕನ್ನು ಸನ್ಯಾಸಿನಿಯಾಗಿ, ಆಧ್ಯಾತ್ಮಿಕ ಜೀವನಕ್ಕೆ ಮೀಸಲಾಗಿಡಬೇಕು ಎನ್ನುವ ಪ್ರಬಲವಾದ ಇಚ್ಛೆಯೊಂದಿಗೆ ಬಸವಾದಿ ಶರಣರ, ವೇದ ಉಪನಿಷತ್ತಿನ, ಆತ್ಮಜ್ಞಾನವನ್ನು ಹೊಂದಬೇಕೆಂಬ ಇವರ ಅನ್ವೇಷಣೆ ನಿತ್ಯವೂ ಲಿಂಗಪೂಜೆ ಜಪ-ಪೂಜೆ, ಧ್ಯಾನ ಹಾಗೂ ಗ್ರಂಥಗಳ ಅಧ್ಯಯನದಲ್ಲಿ ತಲ್ಲೀನರಾಗುತ್ತಿದ್ದರು.

ಗುರುಗಳ ದೀಕ್ಷೆ ಪಡೆದ ನಂತರ ಇವರ ಆಧ್ಯಾತ್ಮಿಕ ಹಂಬಲ ಹೆಚ್ಚುತ್ತ ಹೋಯಿತು. ಪುರಾಣ ಪುಣ್ಯ ಕಥೆಗಳನ್ನು ಓದುವುದು,



ಪ್ರವಚನವನ್ನು ಕೇಳುವುದು ಮಠ-ಮಾನ್ಯಗಳಿಗೆ ಹೋಗುವುದು, ಪೂಜೆ ಧ್ಯಾನ ಮುಂದುವರೆಯುತ್ತಾ ಕೊನೆಗೊಂದು ದಿನ ಎಲ್ಲವನ್ನೂ ತೊ-ರೆದು ಸನ್ಯಾಸಿನಿಯಾಗಿ ಆತ್ಮಜ್ಞಾನದ ಅರಿವನ್ನು ಇಡೀ ಸಮಾಜಕ್ಕೆ ಉಣಬಡಿಸಬೇಕು ಎನ್ನುವ ಮಹದಾಸೆ ಇವರಲ್ಲಿ ಇತ್ತು. ಮನೆಯವರೆಲ್ಲರೂ ಕೂಡ ವಿರೋಧಿಸಿದರು. ಎಲ್ಲಾ ಸಂಕೀರ್ಣತೆಗಳನ್ನು ಮೀರಿ, ಎಲ್ಲಾದರೂ ಗುರುಗಳ ಹತ್ತಿರ ಆಶ್ರಯವನ್ನು ಪಡೆದು ಆಧ್ಯಾತ್ಮಿಕ ಉನ್ನತಿಯನ್ನು ಹೊಂದಲೇಬೇಕೆಂದು ದಿಟ್ಟತನವನ್ನು ಮನದಲ್ಲಿ ತಾಳಿದರು.


ಈ ಎಲ್ಲಾ ಸಂಗತಿಗಳನ್ನು ಗಮನಿಸಿದ ಶಿವಾನಂದ ಮಠದ ಹಿರಿಯ ಸ್ವಾಮಿಗಳಾದ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಈ ಮಗುವಿಗೆ ಎಲ್ಲಾದರೂ ಒಂದುಕಡೆ ಆಶ್ರಯ ನೀಡಿ ಇವರ ಆಧ್ಯಾತ್ಮಿಕ ಶಿಕ್ಷಣಕ್ಕೆ ಅವಕಾಶ ಕಲ್ಪಿಸಬೇಕು ಎನ್ನುವ ಇಚ್ಛೆಯನ್ನು ಹೊಂದಿ, ಶಿವಾನಂದ ಮಠದ ಪರಮ ಭಕ್ತರಾಗಿದ್ದ ಪಕ್ಕದೂರು ಅಸುಂಡಿಯ ವೆಂಕರಡ್ಡಿ ಹುಚ್ಚಣ್ಣವರ ಅವರನ್ನು ಕರೆದು ತಾಯಿಗೆ ಆಶ್ರಯ ನೀಡಬೇಕು ಎಂದು ಕೇಳಿಕೊಂಡಾಗ, ನಡೆ-ನುಡಿಯಲ್ಲಿ ಪವಿತ್ರತೆಯನ್ನು ಹೊಂದಿದ್ದ, ಪರಿಶುದ್ಧ ಅಂತಃಕರಣದ ದೈವೀ ಗುಣ ಸಂಪನ್ನರಾದ ವೆಂಕರಡ್ಡಿ ಹುಚ್ಚಣ್ಣವರ ಹಾಗೂ ಅವರ ಧರ್ಮಪತ್ನಿ ವೆಂಕಮ್ಮನವರು ನೀಲಮ್ಮ ತಾಯಿಯವರನ್ನು ತಮ್ಮ ಮಗಳಾಗಿ ಸ್ವೀಕರಿಸಿ, ಮಮತೆ ವಾತ್ಸಲ್ಯವನ್ನು ತೆ-ೂರುತ್ತಾ ಇವರ ಆಧ್ಯಾತ್ಮಿಕ ಉನ್ನತಿಗೆ ಪ್ರೇರಕ ಶಕ್ತಿಯಾದರು.

ನೀಲಮ್ಮ ತಾಯಿಯವರ ಸತತ ಪರಿಶ್ರಮ ಆಧ್ಯಾತ್ಮಿಕ ಅನ್ವೇಷಣೆಯ ಹಂಬಲ, ಇವರನ್ನು ಇಂದು ಆಧ್ಯಾತ್ಮಿಕ ಉನ್ನತಿಯ ಮೇರು ಶಿವಶರಣೆಯನ್ನಾಗಿ ಮಾಡಿದೆ. ಈ ನಾಡಿನ ಮಹಾನ್ ಪೂಜ್ಯ ಗುರುಗಳಿಂದ ಮಠಮಾನ್ಯಗಳಿಂದ ಪ್ರಶಸ್ತಿ ಪುರಸ್ಕಾರಗಳು ಅವರನ್ನು ಅರಸಿ ಬಂದಿವೆ. ಗಮಕ ಕಲಾ ವಿಶಾರದೆ, ನಿಜಾನುಭಾವಿ, ಗುರುಭಕ್ತಿ ಚಂದ್ರಿಕೆ, ಪ್ರವಚನ ಕಲಾನಿಧಿ ಇನ್ನೂ ಮುಂತಾದ ಬಿರುದುಗಳನ್ನು ನೀಡಿ ಸನ್ಮಾನಿಸಿದ್ದಾರೆ.

ನಾಡಿನ ಭಕ್ತಾದಿಗಳ ಸಹಕಾರದೊಂದಿಗೆ ಇವರ ತಂದೆ ಶ್ರೀ ವೆಂಕರಡ್ಡಿ ಹುಚ್ಚಣ್ಣವರ ಇವರ ಸತತ ಪರಿಶ್ರಮದ ಫಲವಾಗಿ, ಮುಗುಳಕೋಡದ ಪೂಜ್ಯ ಶ್ರೀ ಸಿದ್ಧರಾಮೇಶ್ವರ ಶಿವಯೋಗಿಗಳವರ ಸೂಚನೆ ಮೇರೆಗೆ ಜಗದ್ಗುರು ಶಿವಾನಂದ ಸ್ವಾಮಿಗಳ ಆಶೀರ್ವಾದದೊಂದಿಗೆ ಗದುಗಿನಲ್ಲಿ ಶ್ರೀ ಶಿವಶರಣೆ ನೀಲಮ್ಮ ತಾಯಿ ಆಧ್ಯಾತ್ಮ ವಿದ್ಯಾಶ್ರಮ ನಿರ್ಮಾಣಗೊಂಡಿತು.

ಈ ವಿದ್ಯಾಶ್ರಮ ದಲ್ಲಿ ಪ್ರತಿ ಮಂಗಳವಾರ ಹಾಗೂ ಶುಕ್ರವಾರ ಮಹಿಳೆಯರಿಗೆ ಸತ್ಸಂಗ ಆಧ್ಯಾತ್ಮಿಕ ಚಿಂತನೆ ಗೋಷ್ಠಿಗಳು ನಡೆಯುತ್ತವೆ. ಇವರ ಈ ಆಧ್ಯಾತ್ಮಿಕ ಸಾಧನೆಯನ್ನು ಗುರುತಿಸಿ ಚೆನ್ನೈ ಇಂಟರ್ನ್ಯಾಷನಲ್ ವಿಶ್ವವಿದ್ಯಾಲಯವು 2017ರಲ್ಲಿ ಗೌರವ ಡಾಕ್ಟರೇಟ್ ಪದವಿಯನ್ನು ನೀಡಿ ಗೌರವಿಸಿದೆ.

ಈ ವರ್ಷ ವಿಶೇಷವಾಗಿ 7.2.2025ರಿಂದ 11.2.2025ರವರೆಗೆ ಪ್ರತಿದಿನ ಸಾಯಂಕಾಲ 6ರಿಂದ 7:30ರವರೆಗೆ ವಚನ ಚಿಂತನ ಪ್ರವಚನ ವಿಶೇಷ ಕಾರ್ಯಕ್ರಮ ಪರಮಪೂಜ್ಯ ಶ್ರೀಮನ್ ನಿರಂಜನ ಪ್ರಣವ ಸ್ವರೂಪಿ ಮಹಾಂತ ಬಸವಲಿಂಗ ಮಹಾಸ್ವಾಮಿಗಳು ಹಾಸನ ಬೇಲೂರು ಅವರಿಂದ ಪ್ರವಚನ ಏರ್ಪಡಿಸಿದ್ದು, ಎಲ್ಲ ಭಕ್ತಾದಿಗಳಿಗೆ ಜ್ಞಾನಾಮೃತವನ್ನು ನೀಡಿದ್ದಾರೆ. ಜೊತೆಗೆ ಪ್ರತಿದಿನ ಪ್ರವಚನದ ನಂತರದಲ್ಲಿ ಸಾಯಂಕಾಲ 7:30ಕ್ಕೆ ಪ್ರಸಾದ ವ್ಯವಸ್ಥೆಯನ್ನು ಕಲ್ಪಿಸಿದ್ದು ವಿಶೇಷವಾಗಿತ್ತು. ಗದುಗಿನ ಆಧ್ಯಾತ್ಮದ ನೆಲೆಬೀಡಿನಲ್ಲಿ ಮಹಿಳಾ ಸಂಕುಲದ ಮಹಾ ಶಕ್ತಿಯಾಗಿ ಶಿವಶರಣೆ ಡಾ. ನೀಲಮ್ಮ ತಾಯಿಯವರು ನಮ್ಮೆಲ್ಲರಿಗೂ ಸನ್ಮಾರ್ಗದ ಹಾದಿ ತೋರುತ್ತಿದ್ದಾರೆ.



**– ಸುಧಾ ಹುಚ್ಚಣ್ಣವರ.**
**ಉಪನ್ಯಾಸಕರು,**
**ಲೇಖಕರು– ಶಿರಹಟ್ಟಿ.**

# ಕ್ರೀಡೆ-ಶಿಕ್ಷಣ ಒಂದೇ ನಾಣ್ಯದ ಎರಡು ಮುಖಗಳು

■ ವಿಜಯಸಾಕ್ಷಿ ಸುದ್ದಿ, ಗದಗ


ನೆಹರು ಯುವ ಕೇಂದ್ರ ಗದಗ ಮತ್ತು ಸರ್ವೋದಯ ಯುವಕ ಮಂಡಳ ಇವರ ಸಂಯುಕ್ತ ಆಶ್ರಯದಲ್ಲಿ ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದ ಬಸವರಾಜ್ ಮ.ಕೊಂಚಿಗೇರಿ ಸರಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಗ್ರಾಮೀಣ ಕ್ರೀಡಾಕೂಟವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಕನಕಮ್ಮ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ಶಿಕ್ಷಣದ ಜೊತೆಗೆ ಕ್ರೀಡೆಯನ್ನು ಸಮನಾಗಿ ನೋಡಬೇಕು. ಕ್ರೀಡೆಯಲ್ಲಿ ಸೋಲು, ಗೆಲುವನ್ನು ಸಮಾನವಾಗಿ ಸ್ವೀಕರಿಸಿದಾಗ ನಾವೆಲ್ಲರೂ ಒಂದೇ ಎಂಬ



ಮನೋಭಾವ ಮೂಡುತ್ತದೆ. ಶಿಕ್ಷಣ ಮತ್ತು ಕ್ರೀಡೆಯಲ್ಲಿ ಕಡಕೋಳ ವಿಶಿಷ್ಟತೆ ಮೆರೆಯಬೇಕು. ಕ್ರೀಡೆಯಲ್ಲಿ ರಾಷ್ಟ್ರಮಟ್ಟದಲ್ಲಿ ಹೆಸರು ಪಡೆಯಬೇಕು. ಕ್ರೀಡಾಪಟುಗಳು ಇಲ್ಲಿನ ಮಣ್ಣಿನ ಗುಣವನ್ನು ದೇಶಕ್ಕೆ ಸಾರಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸರ್ವೋದಯ ಸಂಘದ ಅಧ್ಯಕ್ಷರಾದ ಪ್ರಕಾಶ ಬಕ್ಕಸದ, ಉಪನ್ಯಾಸಕ ಮಲ್ಲಪ್ಪ ಹರ್ತಿ ಸ್ವಾಗತಿಸಿದರು. ಉಪನ್ಯಾಸಕ ಶರಣಪ್ಪ ಕಲಗುಡಿ ಕಾರ್ಯಕ್ರಮ ನಿರೂಪಿಸಿದರು. ಜ್ಯೋತಿ ಕೊಂಚಿಗೇರಿ ವಂದಿಸಿದರು. ಮಂಜುನಾಥ್ ಹಾರ್ಲಾಪುರ, ರವಿ ಹೊಂಬಾಳಿ, ಕಾಲೇಜಿನ ಎಲ್ಲಾ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.



ರಾಜ್ಯ ಸರಕಾರದ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದ ಪರಿಶೀಲನೆಗಾಗಿ ರೋಣ ತಾಲೂಕಾ ಮಟ್ಟದ ತ್ರೈಮಾಸಿ ಪರಿಶೀಲನಾ(ಕೆಡಿಪಿ) ಸಮಿತಿಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ಹೊಳೆಆಲೂರ ಗ್ರಾಮದ ಫಕ್ರುಸಾಬ ಎಸ್. ಚಿಕ್ಕಮಣ್ಣೂರ ಅವರನ್ನು ಜಿ.ಪಂ ಸಿಇಒ ಭರತ್ ಎಸ್ ಅವರು ನೇಮಕ ಮಾಡಿ ಆದೇಶಿಸಿದ್ದಾರೆ.

### ಮಣಿಪುರ ಸಂಘರ್ಷದಲ್ಲಿ ಹತರಾಗಿದ್ದು 258 ಕ್ಕೂ ಹೆಚ್ಚು ಜನ; 20 ತಿಂಗಳು ಕಳೆದರೂ ನಿಲ್ಲದ ಹಿಂಸಾಚಾರ

■ ವಿಜಯಸಾಕ್ಷಿ ಸುದ್ದಿ, ಮಣಿಪುರ


ಮಣಿಪುರದಲ್ಲಿ ಭುಗಿಲೆದ್ದ ಹಿಂಸಾಚಾರವನ್ನು ಶಮನ ಮಾಡುವಲ್ಲಿ ರಾಜ್ಯ ಮತ್ತು ಕೇಂದ್ರದ ಬಿಜೆಪಿ ಸರ್ಕಾರಗಳು ವಿಫಲವಾಗಿವೆ. 20 ತಿಂಗಳ ಹಿಂಸಾಚಾರದಲ್ಲಿ 258ಕ್ಕೂ ಹೆಚ್ಚು ಜನ ಸಾವನ್ನಪ್ಪಿದ್ದು, ಲಕ್ಷಾಂತರ ಜನ ನಿರಾಶ್ರಿತರಾಗಿದ್ದಾರೆ. ಎಸ್‌ಟಿ ಮೀಸಲಾತಿ ವಿವಾದದದಿಂದ ಪ್ರಬಲ ಮೈತೇಯಿ ಮತ್ತು ಬುಡಕಟ್ಟು ಕುಕಿ ಸಮುದಾಯಗಳ ನಡುವಿನ ಸಂಘರ್ಷದಲ್ಲಿ ಕಳೆದ ವರ್ಷ ಮೇ ತಿಂಗಳಿನಿಂದ ಮಣಿಪುರದಲ್ಲಿ ಭದ್ರತಾ ಪಡೆಗಳು ತೆಗೆದುಕೊಂಡ ಕ್ರಮದಿಂದಾಗಿ ಸಾವನ್ನಪ್ಪಿದವರ ಸಂಖ್ಯೆ 258 ಕ್ಕೆ ತಲುಪಿದೆ ಎಂದು ಕೇಂದ್ರದ ಭದ್ರತಾ ಸಲಹೆಗಾರ ಕುಕ್ದೀಪ್ ಸಿಂಗ್ ಕಳೆದ ವರ್ಷ ತಿಳಿಸಿದ್ದರು.

# ತಂದೆ ತಾಯಿಗಳಿಗೆ ನಿರಾಸೆ ಮಾಡಬೇಡಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಮ್ಮನ್ನು ಹೆತ್ತ ತಂದೆ-ತಾಯಿಗಳು ನಿಮ್ಮ ಬಗ್ಗೆ ಅಪಾರವಾದ ಕನಸುಗಳನ್ನು ಇಟ್ಟುಕೊಂಡಿದ್ದಾರೆ. ತಮ್ಮ ಕಷ್ಟಗಳನ್ನು ಸಹಿಸಿಕೊಂಡು ನಿಮ್ಮ ವಿದ್ಯಾಭ್ಯಾಸಕ್ಕೆ ಅವರು ಶ್ರಮಿಸುತ್ತಿದ್ದಾರೆ. ಅವರ ಕನಸುಗಳನ್ನು ನೀವು ಎಂದಿಗೂ ನಿರಾಸೆ ಮಾಡಬೇಡಿ ಎಂದು ರೋಣ ಪುರಸಭೆ ಮಾಜಿ ಉಪಾಧ್ಯಕ್ಷ ಮಿಥುನ್ ಪಾಟೀಲ ಹೇಳಿದರು.

ಪಟ್ಟಣದ ಅಭಿನವ ಅನ್ನದಾನೇಶ್ವರ ಪಿಯು ಕಾಲೇಜಿನ ವಿವಿಧ ಸಾಂಘಿಕ ಚಟುವಟಿಕೆಗಳ ಮುಕ್ತಾಯ ಹಾಗೂ ಪಿಯು ವಿದ್ಯಾರ್ಥಿಗಳ ಬೀಳ್ಕೊಡುಗೆ



ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪಿಯು ನಂತರದ ಗುರಿಯನ್ನು ಈಗಲೇ ನಿರ್ಧರಿಸಿಕೊಳ್ಳಿ. ಮುಂಬರುವ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ, ನಿಮ್ಮ ಗುರಿಯನ್ನು ತಲುಪಲು ನೀವು ಇಂದಿನಿಂದಲೇ ಸಿದ್ಧರಾಗಿ. ಸರಿಯಾದ ಯೋಚನೆಯನ್ನು ಮಾಡಿ ಜೀವನದಲ್ಲಿ ಉತ್ತಮ ಭವಿಷ್ಯವನ್ನು ನಿರ್ಮಿಸಿಕೊಳ್ಳಿ ಎಂದು ಹೇಳಿದರು.

ಸಂಸ್ಥೆಯ ಶೈಕ್ಷಣಿಕ ಸಲಹೆಗಾರ ಬಿ.ಎಸ್. ಗೌಡರ ಮಾತನಾಡಿ, ನಿಮ್ಮ ಭವಿಷ್ಯದ ಹಿಂದೆ ನಿಮ್ಮ ಪಾಲಕರ ಶ್ರಮವಿದೆ. ಗುರಿಯಿಲ್ಲದವ ಜೀವನದಲ್ಲಿ ಏನನ್ನೂ ಸಾಧಿಸಲಾರ. ತಂದೆ-ತಾಯಿಗಳಿಗೆ ಒಳ್ಳೆಯ ಮಕ್ಕಳಾಗಿ. ಪರಿಶ್ರಮದಿಂದ ಮುಂದೆ ಬಂದವರಿಗೆ ಜಯದ ಮಾಲೆ ಎಂದಿಗೂ ದೊರಕುತ್ತದೆ ಎಂದರು.

ಎಸ್‌ಎ ಪಿಯು ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಮಾತನಾಡಿ, ಪರೀಕ್ಷೆಯಲ್ಲಿ ನಕಲು ನಡೆಯುತ್ತದೆ, ನಾನು ಹೇಗಾದರೂ ಪಾಸಾಗಬಲ್ಲೆನೆಂಬ ವಿಚಾರವನ್ನು ಮೊದಲು ತೆಗೆದು ಹಾಕಿ. ಈ ಸಾರೆಯ ಪರೀಕ್ಷೆಗೆ ವೆಬ್‌ಕಾಸ್ಟಿಂಗ್ ವ್ಯವಸ್ಥೆಯನ್ನು ಅಳವಡಿಸಿದ್ದಾರೆ. ನಿಮ್ಮ ಸ್ವಂತಿಕೆ ನಿಮ್ಮನ್ನು ಕಾಪಾಡುತ್ತದೆ. ನಿಮ್ಮ ಸ್ವಂತ ಬಲದ ಮೇಲೆ ನೀವು ಪರೀಕ್ಷೆ ಬರೆಯಲು ಸಿದ್ಧರಾಗಿ ಎಂದರು.

ಪ್ರಾಚಾರ್ಯೆ ಅನಸೂಯಾ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ ಕಾಲೇಜಿನ ಪ್ರಗತಿಯ ಮುನ್ನೋಟವನ್ನು ನೀಡಿದರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿ ಅಧ್ಯಕ್ಷ ವೀರಣ್ಣ ಶೆಟ್ಟರ ಮಾತನಾಡಿದರು.

ವೇದಿಕೆಯ ಮೇಲೆ ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಸದಸ್ಯ ಆರ್.ಜಿ. ಪಾಟೀಲ ಉಪಸ್ಥಿತರಿದ್ದರು.

ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ 33ನೇ ಪುಣ್ಯಸ್ಮರಣೆ ಆಚರಣೆ

# ಸಚಿವ ಎಚ್.ಕೆ. ಪಾಟೀಲರಿಂದ ಪುಷ್ಪಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ದಿ. ಕೆ.ಎಚ್. ಪಾಟೀಲರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ 33ನೇ ಪುಣ್ಯಸ್ಮರಣೆ ಆಚರಿಸಲಾಯಿತು. ನಂತರ ಪ್ರಾರ್ಥನಾ ಸಭೆ ಜರುಗಿತು.

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ದಿ. ಕೆ.ಎಚ್. ಪಾಟೀಲರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.



ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಐ.ಎಸ್. ಪಾಟೀಲ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ರೋಣ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಮಿಥುನ್ ಪಾಟೀಲ, ಕರ್ನಾಟಕ ರಾಜ್ಯ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ಜಿಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ ಸೇರಿ ಹಲವರು ಕೆ.ಎಚ್. ಪಾಟೀಲ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಮುಖಂಡರಾದ ಬಸವರಾಜ ಕಡೆಮನಿ, ಪ್ರಭು ಬುರಬುರೆ, ಜೆ.ಕೆ. ಜಮಾದಾರ, ಎಸ್.ಆರ್. ನಾಗನೂರ, ರಾಮಣ್ಣ ಫಲದೊಡ್ಡಿ, ಮನ್ಸುಖ್ ಪುಣೇಕರ್, ವಿದ್ಯಾಧರ ದೊಡ್ಡಮನಿ, ಮಾರ್ತಾಂಡಪ್ಪ ಹಾದಿಮನಿ, ಕೃಷ್ಣ ಪರಾಪೂರ, ಪರಪ್ಪ ಕಮತರ, ವಿ.ಕೆ. ಮಟ್ಟಿ, ಗೋಪಾಲ ಮಳಗಿ, ಅಬ್ದುಲ್ ರೆಹಮಾನ್ ಹುಯಿಲಗೋಳ, ಎಕಬೋಟೆ, ಬಸವರಾಜ ಸುಂಕಾಪೂರ, ನಿಂಗಪ್ಪ ಚಲವಾದಿ, ಮಂಜು ಪೂಜಾರ, ಎಂ.ಎಂ. ಬಡ್ನಿ, ಎಸ್.ಎನ್. ಬಳ್ಳಾರಿ, ಮಲ್ಲಪ್ಪ ಕಲಗುಡಿ, ಸಿ.ಬಿ. ದೊಡ್ಡಗೌಡ್ರ, ಹೇಮಂತ ಪಾಟೀಲ, ಎಂ.ಐ. ಪಾಟೀಲ, ವಿಜಯ ಕಲ್ಮನಿ, ಅನಿಲ ಗರಗ, ಎಚ್.ಕೆ. ಅಕ್ಕಿ, ವಸಂತ ಸಿದ್ದಮ್ಮನಹಳ್ಳಿ, ಅನಿಲ ಸಿದ್ದಮ್ಮನಹಳ್ಳಿ, ಇಮ್ತಿಯಾಜ್ ಶಿರಹಟ್ಟಿ, ಮುನ್ನಾ ರೇಶ್ಮಿ, ಚಿಮ್ಮಿ ನದಾಫ್, ಮಹಮ್ಮದ್ ಶಾಲಗಾರ, ಅನ್ವರ ಶಿರಹಟ್ಟಿ, ಜೂನಸಾಬ್ ನಮಾಜಿ, ಯುಸೂಫ್ ನಮಾಜಿ, ರುದ್ರಗೌಡ ಪಾಟೀಲ, ಸೋಮು ಲಮಾಣಿ, ಚನ್ನವೀರ ಮಳಗಿ ಸೇರಿ ಹಲವರು ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಫೆಬ್ರವರಿ 11 ಮತ್ತು 12 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಫೆಬ್ರವರಿ 11 ರಂದು ಮಧ್ಯಾಹ್ನ 12 ಗಂಟೆಗೆ ಗದಗ ನಗರದ ಬ್ರೈಟ್ ಹಾರಿಜೋನ್ ಸ್ಕೂಲ್ ಹತ್ತಿರ, ಕಳಸಾಪೂರ ರಸ್ತೆಯಲ್ಲಿರುವ ಕಿತ್ತೂರು ಚನ್ನಮ್ಮ ಭವನದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಸಂಜೆ 4 ಗಂಟೆಗೆ ಹುಬ್ಬಳ್ಳಿ ವಿಶ್ವಭಾರತಿ ಬಾಲಕಿಯರ ಪ್ರೌಢಶಾಲೆಯ ವಿಶ್ವಭಾರತಿ ಬಾಲಕಿಯರ ಪ್ರೌಢಶಾಲೆ ಪದವಿ ಪೂರ್ವ ಮಹಾವಿದ್ಯಾಲಯದ ಸುವರ್ಣಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಹಾಗೂ ಮುಳಗುಂದ ಪಟ್ಟಣ ಶ್ರೀ. ಬಾಲಲೀಲಾ ಮಹಾಂತ ಶಿವಯೋಗಿಗಳ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಫೆಬ್ರವರಿ 12 ರಂದು ಸಂಜೆ 7 ಗಂಟೆಗೆ ನಗರದ ಜಿಲ್ಲಾಡಳಿತ ಭವನದಲ್ಲಿ ಗದಗ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಸಭೆ ನಡೆಸುವರು.

ನಂತರ ರಸ್ತೆ ಮೂಲಕ ಹುಬ್ಬಳ್ಳಿಗೆ ತಲುಪಿ ರಾಣಿ ಚೆನ್ನಮ್ಮ ರೈಲು ಮೂಲಕ ಫೆಬ್ರವರಿ 13 ಬೆಂಗಳೂರಿಗೆ ತಲುಪುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಅ.ಭಾ.ವೀ ಮಹಾಸಭಾದ ಸದಸ್ಯತ್ವ ಅಭಿಯಾನದಲ್ಲಿ ರಾಜ್ಯಾಧ್ಯಕ್ಷ ಶಂಕರ ಬಿದರಿ

# ಲಿಂಗಾಯತರು ಒಗ್ಗಟ್ಟಾದರೆ ಸರ್ಕಾರ ಅಲ್ಲಾಡುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ 7 ಕೋಟಿ ಜನಸಂಖ್ಯೆಯಲ್ಲಿ 3 ಕೋಟಿಗಿಂತಲೂ ಹೆಚ್ಚಿನ ಜನಸಂಖ್ಯಾ ಬಲವುಳ್ಳ ವೀರಶೈವ-ಲಿಂಗಾಯತರು ಒಗ್ಗಟ್ಟಾದಲ್ಲಿ ರಾಜ್ಯ ಮತ್ತು ಕೇಂದ್ರ ಸರಕಾರವನ್ನೇ ಅಲುಗಾಡಿಸಿ ನಾವಿದ್ದಲ್ಲಿಗೆ ಹಕ್ಕು-ಸೌಲಭ್ಯಗಳನ್ನು ಪಡೆಯಬಹುದು. ಕಾರಣ ನಾವೆಲ್ಲರೂ ಒಗ್ಗಟ್ಟಾಗಬೇಕಿದೆ ಎಂದು ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾದ ರಾಜ್ಯ ಅಧ್ಯಕ್ಷ ಶಂಕರ ಬಿದರಿ ಹೇಳಿದರು.

ಅವರು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಮಹಾಸಭಾದ ಗದಗ ಜಿಲ್ಲಾ ಘಟಕ ರವಿವಾರ ಏರ್ಪಡಿಸಿದ್ದ ಮಹಾಸಭಾದ ಆಜೀವ ಸದಸ್ಯತ್ವ ಅಭಿಯಾನ ಹಾಗೂ ಸಂಘಟನೆಯ ಬಲವರ್ಧನೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಾಸಭಾ ರಾಜ್ಯ ಸಂಘಟನೆಯು ರಾಜ್ಯದ ವೀರಶೈವ-ಲಿಂಗಾಯತರನ್ನು ಪ್ರಬಲ ಸಂಘಟನೆಗೆ ಹೆಚ್ಚಿನ ಒತ್ತು ನೀಡಿದ್ದು, 2027ರೊಳಗೆ ರಾಜ್ಯದ ಕನಿಷ್ಠ 200 ತಾಲೂಕುಗಳಲ್ಲಿ ಪ್ರತಿ ತಾಲೂಕಿಗೆ ಕನಿಷ್ಠ 10 ಸಾವಿರ ಆಜೀವ ಸದಸ್ಯರನ್ನು ಮಾಡುವ ಗುರಿ ಹೊಂದಿದೆ. ಹಾಗೆಯೇ ಗದಗ ಜಿಲ್ಲೆಯಲ್ಲೂ 50 ಸಾವಿರ ಸದಸ್ಯರನ್ನು ಮಾಡಲು ಜಿಲ್ಲಾ ತಾಲೂಕು ಸಂಘಟನೆಗಳು ಹೆಚ್ಚು ಕ್ರಿಯಾಶೀಲತೆಯಿಂದ ಕಾರ್ಯ ನಿರ್ವಹಿಸಬೇಕು. ಸಮಾಜ ಬಾಂಧವರು ಈ ವಿಷಯಕ್ಕೆ ಕೈಜೋಡಿಸಬೇಕು ಎಂದರು.

ಮಹಾಸಭಾದ ತಾಲೂಕಾ ಸಂಘಟನೆಯ ಮೂಲಕ ಸಮಾಜದ ಪ್ರತಿ ಕುಟುಂಬದ ಜನಗಣತಿ,



ಆರ್ಥಿಕ, ಶೈಕ್ಷಣಿಕ, ಸಾಮಾಜಿಕ, ವಾಸ್ತವಿಕ ಚಿತ್ರಣದ ಮಾಹಿತಿಯನ್ನು ಗಣಕೀಕೃತ ಮಾಡಲು ಉದ್ದೇಶಿದೆ. ಶೀಘ್ರದಲ್ಲೇ ರಾಜ್ಯದ ಎಲ್ಲ ತಾಲೂಕ ಘಟಕಗಳಿಗೆ ಕಂಪ್ಯೂಟರ್‌ಗಳನ್ನು ನೀಡಿ ಈರ್ವರು ಸಿಬ್ಬಂದಿಗಳನ್ನು ನೇಮಿಸಿ ಮಾಹಿತಿಯನ್ನು ಕಲೆ ಹಾಕಲಾಗುತ್ತಿದೆ. ಕಾರಣ ವೀರಶೈವ-ಲಿಂಗಾಯತ ಕುಟುಂಬದ ಮುಖ್ಯಸ್ಥರು ಮಕ್ಕಳ ಹಾಗೂ ಸಮಾಜದ ಭವಿಷ್ಯದ ಹಿತದೃಷ್ಟಿಯಿಂದ ಮಾಹಿತಿ ಒದಗಿಸಬೇಕೆಂದರು.

ಗ್ರಾಮೀಣ ಮತ್ತು ನಗರ ಪ್ರದೇಶ ಸೇರಿ ತಾಲೂಕ, ಜಿಲ್ಲಾ ಕೇಂದ್ರಗಳಿಂದ ಲಭ್ಯವಾಗುವ ಈ ಎಲ್ಲ ಸಮಗ್ರ ಮಾಹಿತಿಯನ್ನು ರಾಜ್ಯ ಮಹಾಸಭಾ ಕ್ರೋಢೀಕರಣ ಮಾಡಿಕೊಂಡು ಸಮಾಜದ ಒಗ್ಗಟ್ಟಿನ ಅಸ್ತ್ರವನ್ನು ಪ್ರಯೋಗಿಸಿ ನಮ್ಮ ಹಕ್ಕು ಬೇಡಿಕೆ ಮಂಡಿಸಿ ಮೀಸಲಾತಿ, ಹಕ್ಕು, ಸೌಲಭ್ಯಗಳನ್ನು ನೀಡಲು ಸರಕಾರ ಮನೆ ಬಾಗಿಲಿಗೆ ಬರುವಂತೆ ಮಾಡಲು ಸಾಧ್ಯವಿದೆ. ಅದು ಒಗ್ಗಟ್ಟಿನಿಂದ ಮಾತ್ರ ಸಾಧ್ಯ. ಒಗ್ಗಟ್ಟಿನಲ್ಲಿ ಬಲವಿದೆ, ಅಭಿವೃದ್ಧಿ ಇದೆ ಎಂದರು.

ಮಹಾಮಾನವತಾವಾದಿ ಬಸವಣ್ಣನವರು ಕಟ್ಟಿದ ಸಾಮಾಜಿಕ ವೈಚಾರಿಕತೆಯ ಬಹುವಿಶಾಲವಾದ ಅರ್ಥದ ಮಹಾಮನೆ ಇಂದು ವಿಭಜನೆಯೊಂದು ಜಾತಿ ಉಪಜಾತಿ, ಉಪಪಂಗಡಳಿಂದ ಕಂಪಾರ್ಟ್‌ಮೆಂಟ್‌ಗಳಾಗಿವೆ. ಈ ಅಡ್ಡಗೋಡೆಯನ್ನು ತೆರೆದು ವಿಶಾಲವಾದ ಮನೆ ನಿರ್ಮಾಣಗೊಳ್ಳಬೇಕಿದೆ ಎಂದರು.

ಅನುಭವ ಮಂಟಪದ ಮೂಲಕ ಬಸವಣ್ಣ ಸಾಮಾಜಿಕ ವೈಚಾರಿಕ ಕ್ರಾಂತಿ ಮಾಡಿರುವ ಈ ಪುಣ್ಯ ನೆಲದಲ್ಲಿ ಬಸವಣ್ಣನ ವಾರಸುದಾರರಾದ ನಾವು ಪರಸ್ಪರ ತಿಳುವಳಿಕೆ, ಪ್ರಜ್ಞಾವಂತಿಕೆಯಿಂದ ಜೀವನ ಮಾಡಬೇಕಿದೆ. ವೀರಶೈವ-ಲಿಂಗಾಯತರು ದುಡಿದ ಹಣವನ್ನು ಜಗಳ, ತಂಟೆ ತಕರಾರು ಮಾಡಿಕೊಂಡು ಪೋಲೀಸ್, ಕೋರ್ಟ್ ಎಂದೆಲ್ಲಾ ಅಲೆದಾಡಿ, ಸಂಬಂಧಗಳನ್ನು ಹಾಳು ಮಾಡಿಕೊಳ್ಳುವರು ಎಂಬ ಮಾತಿದೆ ಇದನ್ನು ಅಳಿಸಿ ಹಾಕಬೇಕು ಎಂದು ತಿಳಿಸಿದರು.

ಹಿರಿಯರು ನಡೆಸಿದ, ಪಂಚಾಯಿತಿ ನೀಡಿದ ತೀರ್ಪುಗಳ ಮುಂದೆ ಯಾವ ಹೈಕೋರ್ಟ್, ಸುಪ್ರೀಂ ಕೋರ್ಟ್ ನೀಡಿಲ್ಲ. ಒಂದು ವೇಳೆ ನೀಡಿದ್ದರೆ ನ್ಯಾಯ ಕೇಳಿದವರು ಮಣ್ಣಾಗಿರುತ್ತಾರೆ ಇಲ್ಲವೇ ಆರ್ಥಿಕವಾಗಿ ದಿವಾಳಿ ಆಗಿರುತ್ತಾರೆ. ಕಾರಣ ಸಮಾಜದ ಹಿರಿಯರು ಈ ಬಗ್ಗೆ ಗಂಭೀರ ಚಿಂತನೆ, ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು ಸಲಹೆ ನೀಡಿದರು.

ಸಮಸ್ತ ವೀರಶೈವ-ಲಿಂಗಾಯತರ ಪ್ರಾತಿನಿಧಿಕ ಸಂಸ್ಥೆಯಾದ ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾದ ಮೂಲ ಆಶಯಕ್ಕೆ ಧಕ್ಕೆ ಆಗದಂತೆ ಸಮಾಜ ಸಂಘಟನೆಗೆ ಹಲವಾರು ರೂಪುರೇಷೆಗಳನ್ನು ಕೈಗೆತ್ತಿಕೊಂಡಿದ್ದು, ತಾಲೂಕ, ಜಿಲ್ಲಾ ಘಟಕಗಳ ಮೂಲಕ ಅದನ್ನು ಸಾಕಾರಗೊಳಿಸಲು ಬದ್ಧತೆಯಿಂದ ಕಾರ್ಯ ಮಾಡುತ್ತಿದೆ. ವೀರಶೈವ-ಲಿಂಗಾಯತ ಎರಡೂ ಒಂದೇ ಎಂದು ಸ್ಪಷ್ಟಪಡಿಸಿ ಗುರು-ವಿರಕ್ತರು ಒಂದೇ ಆಗಿದ್ದು ಜನಕಲ್ಯಾಣ, ಸಮಾಜ ಉದ್ಧಾರ ಅವರ ಉದ್ದೇಶ ಎಂಬುದನ್ನು ನಾವು ತಿಳಿಯಬೇಕು ಎಂದು ಶಂಕರ ಬಿದರಿ ತಿಳಿಸಿದರು.

### ದುರ್ಗಾಶಕ್ತಿ ಸತ್ಸಂಗ ಕಾರ್ಯಕ್ರಮದಲ್ಲಿ ಯರೇಬೂದಿಹಾಳದ ರವಿಚಂದ್ರಶಾಸ್ತ್ರಿಗಳು

# ಶ್ರೀ ರೇಣುಕಾ ಯಲ್ಲಮ್ಮಳ ಜೀವನ ಚರಿತ್ರೆ ಅಗಾಧ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ರಾಮಗಿರಿ ಗ್ರಾಮದ ಶ್ರೀ ದುರ್ಗಾದೇವಿ ಸೇವಾ ಸಮಿತಿ ವತಿಯಿಂದ ಭಾರತಹುಣ್ಣಿಮೆ ನಿಮಿತ್ತ (8ನೇ ಮಾಸಿಕ) ದುರ್ಗಾಶಕ್ತಿ ಸತ್ಸಂಗ ಕಾರ್ಯಕ್ರಮವು ರಾಮಗಿರಿ ಗ್ರಾಮದ ಶ್ರೀ ದುರ್ಗಾದೇವಿ ದೇವಸ್ಥಾನದಲ್ಲಿ ನೆರವೇರಿತು.

ಕಾರ್ಯಕ್ರಮದಲ್ಲಿ ಶ್ರೀ ರೇಣುಕಾ ಯಲ್ಲಮ್ಮನ ಜೀವನ ಚರಿತ್ರೆ ಕುರಿತು ಯರೇಬೂದಿಹಾಳದ ರವಿಚಂದ್ರಶಾಸ್ತ್ರಿಗಳು ಉಪನ್ಯಾಸ ನೀಡಿ, ಶ್ರೀ ರೇಣುಕಾ ಯಲ್ಲಮ್ಮಳ ಜೀವನ ಚರಿತ್ರೆ ಬಹಳ ಅಗಾಧವಾಗಿದೆ. ದೇವಿಯು ದುಷ್ಟರನ್ನು ನಾಶಮಾಡುವ, ಶಿಕ್ಷಿಸುವ ಪ್ರಮುಖ ದೇವಿಯೆಂದು ಕರೆಯಲಾಗುತ್ತದೆ. ಆದರೆ ಅವಳು ತನ್ನ ಭಕ್ತರ ಮೇಲೆ ಪ್ರೀತಿ ಮತ್ತು ಆಶೀರ್ವಾದವನ್ನು ನೀಡುವ



ಕರುಣಾಮಯಿ ತಾಯಿ ಕೂಡ ಆಗಿದ್ದಾಳೆ. ಈ ಅಂಶದಲ್ಲಿಯೇ ಆಕೆಯನ್ನು ಇಲ್ಲಿ ಪೂಜಿಸಲಾಗುತ್ತದೆ. ಹೀಗೆ ಅವರ ಭಕ್ತಿ ಮನುಷ್ಯನ ಹೃದಯದಲ್ಲಿನ ದ್ವೇಷ, ಮತ್ಸರ ಅಳಿಸಲು ಸತ್ಸಂಗದಂತಹ ಕಾರ್ಯಕ್ರಮಗಳು ನಿರಂತರವಾಗಿ ನಡಯಬೇಕಿದೆ ಎಂದು ಹೇಳಿದರು.

ಸೋಮಣ್ಣ ಬೆಟಗೇರಿ ಮಾತನಾಡಿ, ಮನುಷ್ಯ ಮನಸ್ಸು ಒಡೆಯುವ ಹಂತಕ್ಕೆ ಬೆಳೆದಿರುವುದು ಕಳವಳಕಾರಿ ಸಂಗತಿಯಾಗಿದೆ. ಮನುಷ್ಯ-ಮನುಷ್ಯರ ನಡುವಿನ ಮನಸ್ಸು, ಹದಯ ಒಂದಾಗಬೇಕಾದರೆ ಪ್ರತಿಯೊಬ್ಬರೂ ಸತ್ಸಂಗದ ಮೊರೆ ಹೋಗಬೇಕಾಗಿದೆ. ಹಿರಿಯರಾದ ಬಸಣ್ಣ ಬೆಟಗೇರಿ ಅವರ ನೇತೃತ್ವದಲ್ಲಿ ಸತ್ಸಂಗ ಕಾರ್ಯಕ್ರಮ ಆಯೋಜಿಸುವ ಮೂಲಕ ಈ ಊರಿನ ಭಕ್ತರಲ್ಲಿ ಅಮೃತದ ಜ್ಞಾನ ಉಣಬಡಿಸುತ್ತಿರುವುದು ಅರ್ಥಪೂರ್ಣವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪತ್ರಕರ್ತ ದಿಗಂಬರ ಪೂಜಾರ, ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ವಿನೋದರಡ್ಡಿ ಅಳವಂಡಿ, ಶಿಕ್ಷಕ ಪ್ರಕಾಶ ಮಗ್ಗದರನ್ನು ಸನ್ಮಾನಿಸಲಾಯಿತು. ಗಂಗಮ್ಮ ಕಾಳೆ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಡಿವೆಕ್ಕ ಬೆಟಗೇರಿ, ಆಯೋಜಕರಾದ ಬಸಣ್ಣ ಬೇಟಗೇರಿ, ಚಂದ್ರಶೇಖರಯ್ಯ ಕಳ್ಳಿಮಠ, ಚನಬಸಪ್ಪ ಲಿಂಗಶೆಟ್ಟಿ, ಬಸವರಾಜ ಯರಗುಪ್ಪಿ, ಎನ್.ಎನ್. ಸಾವಿರಕುರಿ, ಕೆ.ಪಿ. ಕಂಬಳಿ, ಶಂಕರಗೌಡ ಪಾಟೀಲ, ಹನಮಂತಪ್ಪ ಹಿತ್ತಲಮನಿ, ಡಿ.ಆರ್. ಬಡ್ನಿ, ಎನ್.ಎಫ್. ಇಮ್ಮಡಿ, ಶೇಖಪ್ಪ ಕಾಳೆ, ಮಹೇಂದ್ರ ಬೆಟಗೇರಿ, ವಿರೇಂದ್ರ ಬೆಟಗೇರಿ, ರವಿ ಕೆರೂರ, ನಿಂಗಪ್ಪ ಯರಗುಪ್ಪಿ ಮುಂತಾದವರಿದ್ದರು.

ಸಮೃದ್ಧಿ ಬೆಟಗೇರಿ ಪ್ರಾರ್ಥಿಸಿದರೆ, ಮುತ್ತು ಸಾವಿರಕುರಿ ಸ್ವಾಗತಿಸಿದರು. ಜ್ಯೋತಿ ಬಡ್ನಿ ಮತ್ತು ಗೀತಾ ಕಾಳೆ ನಿರೂಪಿಸಿದರು. ಶಿಕ್ಷಕರಾದ ಎಸ್.ಬಿ. ಜಗ್ಗಲ್ ವಂದಿಸಿದರು.

# ಪ್ರವಾಸಗಳು ವಿದ್ಯಾರ್ಥಿಗಳ ವಿಧ್ಯಾಬ್ಯಾಸಕ್ಕೆ ಪೂರಕ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ವ್ಯವಸ್ಥೆಯಲ್ಲಿ ಪ್ರವಾಸಗಳು ಒಂದು ಭಾಗವಾಗಿದ್ದು, ಪ್ರವಾಸಗಳಿಂದ ವಿದ್ಯಾರ್ಥಿಗಳ ವಿಧ್ಯಾಭ್ಯಾಸಕ್ಕೆ ಪೂರಕವಾಗುತ್ತವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಅವರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಸೋಮವಾರ ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4ರಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳ ಪ್ರವಾಸ ಕಾರ್ಯಕ್ರಮ 'ಕರ್ನಾಟಕ ದರ್ಶನ'ಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶ ಸುತ್ತು, ಕೋಶ ಓದು ಎಂಬ ಮಾತಿನಂತೆ ಪ್ರವಾಸವು ವಿದ್ಯಾರ್ಥಿ ಜೀವನದಲ್ಲಿ ಬಹು ಮುಖ್ಯ ಪಾತ್ರ ವಹಿಸುತ್ತದೆ. ಪ್ರವಾಸ ಮಾಡುವುದರಿಂದ ವಿದ್ಯಾರ್ಥಿಗಳ ಸೃಜನಶೀಲ ಸಾಮರ್ಥ್ಯ ವೃದ್ಧಿಸುತ್ತದೆ. ವಿದ್ಯಾರ್ಥಿಗಳಲ್ಲಿ ನಮ್ಮ ನಾಡು, ನಮ್ಮ ನೆಲದ ಬಗ್ಗೆ ಅಭಿಮಾನ ಮೂಡುತ್ತದೆ. ಇಂತಹ ಯೋಜನೆಗಳು ವಿದ್ಯಾರ್ಥಿಗಳಿಗೆ ಉಪಯುಕ್ತವಾಗಿದ್ದು, ಕಾಳಜಿಯಿಂದ ಪ್ರವಾಸವನ್ನು ಯಶಸ್ವಿಯಾಗಿ ಪೂರೈಸುವಂತೆ ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಲಕ್ಷ್ಮೇಶ್ವರ ಪುರಸಭೆಯ ಅಧ್ಯಕ್ಷೆ ಯಲ್ಲವ್ವ ದುರ್ಗಣ್ಣವರ ಯಶಸ್ವಿಯಾಗಿ ಪ್ರವಾಸ ಜರುಗಲಿ ಎಂದು ಶುಭಕೋರಿದರು. ನೇತೃತ್ವ ವಹಿಸಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಪ್ರವಾಸದ ನಿಯಮಗಳು ಹಾಗೂ ಎಚ್ಚರಿಕೆಗಳ ಬಗ್ಗೆ ವಿವರಿಸಿದರು. ಪುರಸಭೆಯ ಉಪಾಧ್ಯಕ್ಷ ಫಿರ್ದೋಷ್ ಆಡೂರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ, ಎಸ್.ಡಿ. ಲಮಾಣಿ ಶುಭ ಹಾರೈಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಪುರಸಭೆಯ ಸದಸ್ಯ ಬಸವರಾಜ ಓದುನವರ, ಎಸ್.ಡಿ.ಎಂ.ಸಿ ಅಧ್ಯಕ್ಷೆ ಅಮೀನಾ ಮಹತ್, ಮುಖ್ಯೋಪಾಧ್ಯಾಯರಾದ ಹೆಚ್.ಬಿ. ಸಣ್ಣಮನಿ, ಬಿ.ಸಿ. ಪಟ್ಟೇದ, ದೈಹಿಕ ಶಿಕ್ಷಣ ಪರೀಕ್ಷಣಾಧಿಕಾರಿ ಎಂ.ಎಂ. ಹವಳದ, ನೋಡಲ್ ಇ.ಸಿ.ಓ ಹರೀಶ ಎಸ್, ಸಿಆರ್‌ಪಿ ಸತೀಶ್ ಭೋಮಲೆ, ಎಸ್.ಡಿ.ಎಂ.ಸಿ ಸದಸ್ಯರು, ವಿವಿಧ ಶಾಲೆಗಳ ಶಿಕ್ಷಕರು, ಪಾಲಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರೌಢವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ನಿರ್ವಹಿಸಿದರು. ಸಿ.ಆರ್.ಪಿ ಉಮೇಶ ನೇಕಾರ ವಂದಿಸಿದರು.

# ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರಾಂತಿ ಸೇನಾ ಗದಗ ಜಿಲ್ಲಾ ಸಂಘಟನೆಯ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಪ್ರವೀಣ ಹಬೀಬ ಇವರನ್ನು ಕ್ರಾಂತಿ ಸೇನಾ ಗದಗ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಪ್ರಮಾಣಪತ್ರ ನೀಡುವ ಮೂಲಕ ಆಯ್ಕೆ ಮಾಡಿದರು.

ಈ ಸಂದರ್ಭದಲ್ಲಿ ಕ್ರಾಂತಿ



ಸೇನಾ ಗದಗ ಜಿಲ್ಲಾ ಉಪಾಧ್ಯಕ್ಷ ಭೀಮಾ ಕಾಟಿಗರ, ಮಹಿಳಾ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರೇಣುಕಾ ಕಬಾಡಿ, ಮಹಿಳಾ ಸಂಘಟನೆಯ ಖಜಾಂಚಿ ಅಕ್ಷತಾ ಪವಾರ, ಕಿರಣ ಪಟ್ಟಣಶೆಟ್ಟಿ, ಶಿವು ಕಂಬಾರ, ಅನೂಪ್ ಮುಂತಾದವರಿದ್ದರು.


# ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿನ ಬೆಂಬಲ ಬೆಲೆ ಯೋಜನೆ ಅಡಿ ಶೇಂಗಾ ಖರೀದಿಗೆ ಫೆಬ್ರವರಿ 15 ರವರೆಗೆ ಅವಧಿ ವಿಸ್ತರಿಸಲಾಗಿದೆ. ರೈತ ಬಾಂಧವರು ನಿಗದಿಪಡಿಸಿದ ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸುವ ಮೂಲಕ ಬೆಂಬಲ ಬೆಲೆಯ ಪ್ರಯೋಜನವನ್ನು ಪಡೆದುಕೊಳ್ಳಬೇಕು.

ಬೆಂಬಲ ಬೆಲೆ ಯೋಜನೆ ಅಡಿ ಪ್ರತಿ ಕ್ವಿಂಟಲ್ ಶೇಂಗಾ ಬೆಳೆಗೆ ರೂ. 6783 ಗಳನ್ನು ನಿಗದಿಪಡಿಸಿದ್ದು, ವಿಸ್ತರಿಸಲಾದ ಅವಧಿಯ ಪ್ರಯೋಜನವನ್ನು ಗದಗ ಜಿಲ್ಲೆಯ ರೈತ ಬಾಂಧವರು ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಬಡ ವಿದ್ಯಾರ್ಥಿಗೆ ವಾರ್ಷಿಕ ಕಲಿಕಾ ಶುಲ್ಕದ ನೆರವು



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತ ಅಂಗವಿಕಲರ ಕ್ಷೇಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗೆ ಗದಗ ಅಲ್ಪಸಂಖ್ಯಾತರ ಅಂಗವಿಕಲರ ಕ್ಷೇಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಶಾಲೆಯ ವಾರ್ಷಿಕ ಕಲಿಕಾ ಶುಲ್ಕ ನೀಡಿ ಸಹಾಯ ಮಾಡಿದರು.

ಶ್ರೀ ಮಹಾವೀರ ಜೈನ್ ಪ್ರೈಮರಿ ಹಾಗೂ ಹೈಸ್ಕೂಲ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ಮಹಮದ ಪುರಕಾನ ಸೈಯದ್ ಇವನ ವಾರ್ಷಿಕ ಕಲಿಕಾ ಶುಲ್ಕ 8,154 ರೂಪಾಯಿಗಳನ್ನು ಅಲ್ಪಸಂಖ್ಯಾತ ಅಂಗವಿಕಲರ ಕ್ಷೇಮಾಭಿವೃದ್ಧಿ ಟ್ರಸ್ಟಿನ ವತಿಯಿಂದ ಟ್ರಸ್ಟಿನ ಅಧ್ಯಕ್ಷರಾದ ಎಂ.ಸಿ. ಶೇಖ್ ಅವರು ಶಾಲೆಯ ಮುಖ್ಯೋಪಾಧ್ಯಾಯರಾದ ಧರ್ಮಸಿ ಇವರ ಸಮ್ಮುಖದಲ್ಲಿ ಹಣ ಪಾವತಿ ಮಾಡಲಾಯಿತು. ಈ ಸಂದರ್ಭದಲ್ಲಿ ವಿದ್ಯಾರ್ಥಿ ಹಾಗೂ ಅರುಣ ಕುಮಾರ್ ಉಪಸ್ಥಿತರಿದ್ದರು.

### ಹರದಗಟ್ಟಿ ತಾಂಡಾದಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘದಿಂದ ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ

# ಒಳ್ಳೆಯ ಸಂಸ್ಕಾರ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಹರದಗಟ್ಟಿ ತಾಂಡಾದಲ್ಲಿ ಗ್ರಾಮದ ಹಳೆಯ ವಿದ್ಯಾರ್ಥಿಗಳ ಸಂಘದಿಂದ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವು ಅದ್ದೂರಿಯಾಗಿ ನೆರವೇರಿತು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಆದರಳ್ಳಿ ಗವಿಮಠದ ಮಹಾತಪಸ್ವಿ ಡಾ.ಕುಮಾರ ಮಹಾರಾಜರು ಆಶೀರ್ವಚನ ನೀಡಿ, ಮನುಷ್ಯ ಒಳ್ಳೆಯ ಸಂಸ್ಕಾರ ಬೆಳೆಸಿಕೊಳ್ಳಬೇಕು. ಸಂಸ್ಕಾರ ಇಲ್ಲದ ವ್ಯಕ್ತಿ ಎಷ್ಟೇ ಉನ್ನತ ಸ್ಥಾನದಲ್ಲಿದ್ದರೂ ಸಹ ಗೌರವ ದೊರೆಯಲಾರದು. ಅಂಕಗಳನ್ನು ಗಳಿಸುವದು ಮಹತ್ವವಲ್ಲ, ಸಂಸ್ಕಾರವು ಮುಖ್ಯ. ಸಂಸ್ಕಾರ ಇಲ್ಲದಿದ್ದರೆ ಅಡ್ಡದಾರಿ ಹಿಡಿಯುವ ಸಾಧ್ಯತೆಗಳಿರುತ್ತವೆ. ಈ ನಿಟ್ಟಿನಲ್ಲಿ ಮಕ್ಕಳನ್ನು ಒಳ್ಳೆಯ ಸಮಾಜ ಚಿಂತಕರನ್ನಾಗಿ ಉತ್ತಮ ದಾರಿಯಲ್ಲಿ ಸಾಗುವಂತೆ ಪ್ರೋತ್ಸಾಹ ನೀಡಿ ಎಂದು ನುಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ವಿದ್ಯಾರ್ಥಿಗಳು ವಿದ್ಯೆಯ ಜತೆಗೆ ಸಂಸ್ಕಾರ, ಶಿಸ್ತು



ರೂಢಿಸಿಕೊಳ್ಳಬೇಕು. ತಂದೆ-ತಾಯಿ, ಗುರು-ಹಿರಿಯರನ್ನು ಗೌರವಿಸಬೇಕು. ಭಾರತೀಯ ಸಂಸ್ಕೃತಿಯನ್ನು ಬೆಳೆಸಿಕೊಂಡು ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಿ ಉತ್ತಮ ವಾತಾವರಣ ಕಲ್ಪಿಸಿಕೊಟ್ಟರೆ ಪ್ರತಿಭೆ ವಿಕಸನಗೊಳ್ಳುತ್ತದೆ ಎಂದು ಹೇಳಿದರು.

ದಂತ ವೈದ್ಯ ಡಾ. ಎಲ್.ಪಿ. ನಾಯ್ಕ ಕಠಾರಿ ಉಪನ್ಯಾಸ ನೀಡಿದರು. ಪತ್ರಕರ್ತ ಕೃಷ್ಣ ಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂತ ಸೇವಾಲಾಲ ಪ್ರಶಸ್ತಿ ಪುರಸ್ಕೃತ ರಮೇಶ ಲಮಾಣಿ, ಕರ್ನಾಟಕ ಸರ್ಕಾರದ ಉನ್ನತ ಪ್ರಶಸ್ತಿ, ಶ್ರೀ ಸಂತ ಸೇವಾಲಾಲ ಪ್ರಶಸ್ತಿ ಪುರಸ್ಕೃತ ಡಾ. ಎಲ್.ಪಿ. ನಾಯ್ಕ ಕಠಾರಿ ಅವರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಮಾಡಲಾಯಿತು.

ಮಾಜಿ ಶಾಸಕ ರಾಮಣ್ಣ ಲಮಾಣಿ ಮಾತನಾಡಿ, ಇಂದು ಮಕ್ಕಳು ವಿದ್ಯೆಯಲ್ಲಿ ಸಾಕಷ್ಟು ಪ್ರಗತಿ ಹೊಂದುತ್ತಿದ್ದರೂ ಸಹ ಅವರಿಗೆ ಸಮಾಜಮುಖಿ ಚಿಂತನೆಗಳನ್ನು ಹೇಳಿಕೊಡುವದರ ಜೊತೆ ಉತ್ತಮ ಸಂಸ್ಕಾರವಂತರನ್ನಾಗಿ ಬೆಳೆಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ಪ್ರೇಮವ್ವ ನಾಯಕ, ಸದಸ್ಯರಾದ ಗಣೇಶ ನಾಯಕ, ಕವಿತಾ ಲಮಾಣಿ, ಲಕ್ಷೀ ಕಾರಬಾರಿ, ಸೋಮಕ್ಕ ತಳವಾರ, ಪುರಪ್ಪ ರಜಪೂತ, ರಾಮಪ್ಪ ಲಮಾಣಿ, ಲಕ್ಷ್ಮಣ ಲಮಾಣಿ, ಥಾವರಪ್ಪ ಲಮಾಣಿ, ಸೋಮಲಪ್ಪ ನಾಯಕ, ಜೀವಪ್ಪ ಡಾವ, ಕೃಷ್ಣ ಕಾರಭಾರಿ, ಮಹಾದೇವ ಅಂಗಡಿ, ರವಿ ಲಮಾಣಿ, ಶಿವಪ್ಪ ನಾಯಕ, ಚಂದ್ರು ಬಡಗೇರ, ಸುರೇಶ ಲಮಾಣಿ, ಶಂಕರ ಕಾರಭಾರಿ, ರಮೇಶ ಲಮಾಣಿ, ಲಕ್ಷ್ಮಣ ಪೂಜಾರ ಇದ್ದರು. ಪರಮೇಶ ಲಮಾಣಿ ಸ್ವಾಗತಿಸಿದರು. ಸಂತೋಷ ರಾಠೋಡ, ರಾಜು ನಾಯಕ ನಿರೂಪಿಸಿದರು.

## ದೆಹಲಿಯಲ್ಲಿ ಬಿಜೆಪಿ ದಿಗ್ವಿಜಯ: ಪ್ರತಿಪಕ್ಷಗಳಿಗೆ ಐತಿಹಾಸಿಕ ಮುಖಭಂಗ



■ವಿಜಯಸಾಕ್ಷಿ ಸುದ್ದಿ, ಗದಗ

ದೆಹಲಿಯಲ್ಲಿ ಕಳೆದ ಹಲವು ವರ್ಷಗಳಿಂದ ಅಧಿಕಾರದಲ್ಲಿದ್ದ ಆಮ್ ಆದ್ಮಿ ಪಕ್ಷವನ್ನು ಸೋಲಿಸಿ ಬಿಜೆಪಿ ಅಧಿಕಾರಕ್ಕೆ ಬಂದಿದ್ದು ಪ್ರತಿಪಕ್ಷಗಳಿಗೆ ಐತಿಹಾಸಿಕ ಮುಖಭಂಗ ಉಂಟು ಮಾಡಿದೆ ಎಂದು ಬಿಜೆಪಿ ಮುಖಂಡರು ಹಾಗೂ ಉಸಿರು ಫೌಂಡೇಶನ್ ಅಧ್ಯಕ್ಷ ಶರಣ್ ಪಾಟೀಲ್ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದೆಹಲಿಯಲ್ಲಿ ಖಾತೆ ತೆರೆಯಲು ಸಹ ಅಸಮರ್ಥವಾಗಿರುವ ಕಾಂಗ್ರೆಸ್ ಈಗಾಗಲೇ ಅಧಃಪತನ ಅನುಭವಿಸುತ್ತಿದೆ. ಅತ್ತ ಕೇಜ್ರಿವಾಲ್ ಅಹಂಕಾರ ಹಾಗೂ ಭ್ರಷ್ಟಾಚಾರದಿಂದ ಬೇಸತ್ತಿದ್ದ ದೆಹಲಿ ಜನರು ಪ್ರಧಾನಿ ಮೋದಿಯವರ ಭವ್ಯ ಆಡಳಿತಕ್ಕೆ ಮಣೆ ಹಾಕಿದ್ದಾರೆ.

ಕರ್ನಾಟಕದಲ್ಲಿ ಉಚಿತ ಭಾಗ್ಯಗಳಿಂದ ಅಧಿಕಾರಕ್ಕೆ ಬಂದು ಸೊಕ್ಕಿನಿಂದ ಮೆರೆಯುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಇದು ಎಚ್ಚರಿಕೆಯ ಗಂಟೆಯಾಗಿದ್ದು, ಕರ್ನಾಟಕದ ಮುಂದಿನ ವಿಧಾನಸಭಾ ಚುನಾವಣೆಗೆ ದೆಹಲಿ ಚುನಾವಣೆ ದಿಕ್ಸೂಚಿಯಾಗಿದೆ ಎಂದಿದ್ದಾರೆ.

---

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರ ಆರಂಭ

# 7 ತಾಲೂಕುಗಳ ತಹಸೀಲ್ದಾರ ಕಚೇರಿ ಎದುರು ಧರಣಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳು ಮತ್ತು ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಜಿಲ್ಲೆಯ ಗ್ರಾಮ ಆಡಳಿತ ಅಧಿಕಾರಿಗಳು ಸೋಮವಾರ ಕರ್ತವ್ಯಕ್ಕೆ ಗೈರಾಗುವ ಮೂಲಕ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದರು.

ಜಿಲ್ಲೆಯ 7 ತಾಲೂಕುಗಳ 163 ಗ್ರಾಮ ಆಡಳಿತಾಧಿಕಾರಿಗಳು ಕರ್ತವ್ಯಕ್ಕೆ ಗೈರಾಗಿ, ಕೈಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಆಯಾ ತಹಸೀಲ್ದಾರ ಕಚೇರಿ ಎದುರು ಮೌನವಾಗಿ ಕುಳಿತು ಮುಷ್ಕರ ನಡೆಸಿದರು. ಈ ವೇಳೆ ಜಿಲ್ಲಾ ಸರಕಾರಿ ನೌಕರರ ಸಂಘ, ಜಿಲ್ಲಾ ಕಂದಾಯ ನೌಕರರ ಸಂಘ, ವಿವಿಧ ರೈತರ ಸಂಘಟನೆಗಳು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ವಿವಿಧ ಸಂಘಟನೆಗಳು ಮುಖಂಡರು ಮುಷ್ಕರದಲ್ಲಿ ಪಾಲ್ಗೊಂಡು ಬೆಂಬಲ ಸೂಚಿಸಿದರು.

ಗ್ರಾಮ ಆಡಳಿತ ಅಧಿಕಾರಿಗಳ ಪ್ರಮುಖ ಬೇಡಿಕೆಗಳಾದ ರಾಜ್ಯಾದ್ಯಂತ ಆಧಾರ್ ಸೀಡಿಂಗ್ ಪ್ರಕ್ರಿಯೆಯಲ್ಲಿ ಪತ್ತೆಯಾಗಿರುವ 51.5 ಲಕ್ಷ ಮೃತ ಖಾತೆದಾರರ ಪಹಣಿ ದಾಖಲೆ ಅಭಿಯಾನ ಮಾದರಿಯಲ್ಲಿ ವಾರಸುದಾರರ ಹೆಸರುಗಳಿಗೆ ಪೌತಿ ಖಾತೆ ದಾಖಲಿಸುವಂತೆ ಇ-ಪೌತಿ ಖಾತಾ ಆಂದೋಲನ ಕೈಬಿಡಬೇಕು. ಚಿಕ್ಕಮಗಳೂರು ಜಿಲ್ಲೆಯಲ್ಲಿ 30 ಗ್ರಾಮ ಆಡಳಿತ ಅಧಿಕಾರಿಗಳ ವಾರ್ಷಿಕ ವೇತನ ಬಡ್ತಿಯನ್ನು ತಡೆದು ನೈಸರ್ಗಿಕ ನ್ಯಾಯ ತತ್ವಗಳನ್ನು ಹಾಗೂ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಹೊರಡಿಸಿರುವ ದಂಡನಾ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಕಂದಾಯ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಎಲ್ಲಾ ವೃಂದಗಳನ್ನು ಒಳಗೊಂಡಂತೆ ನೀಡುತ್ತಿರುವ ಅನುಕಂಪದ ನೇಮಕಾತಿಯ ಹುದ್ದೆಯ ವೃಂದ ಹಾಗೂ ನೇಮಕಾತಿ ತಿದ್ದುಪಡಿ ಮಾಡಬೇಕು. ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಜೀವಹಾನಿ ಸಂಭವಿಸಿದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ಮಂಜೂರು ಮಾಡಬೇಕು. ಪ್ರಯಾಣ ಭತ್ಯೆಯನ್ನು 500ನಿಂದ 5000 ರೂ.ಗೆ ಹೆಚ್ಚಳ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಘಟಕದ ಗೌರವ ಅಧ್ಯಕ್ಷ ಪಿ.ಬಿ. ಫೋರೆಖಾನ್, ಅಧ್ಯಕ್ಷ ಅರುಣಗೌಡ ಮಂಟೂರ, ಉಪಾಧ್ಯಕ್ಷರಾದ ಚಂದ್ರಶೇಖರ ನಾಯಕ, ರಾಧಾ ದೇಸಾಯಿಪಟ್ಟಿ, ಪ್ರಧಾನ ಕಾರ್ಯದರ್ಶಿ ಐ.ವೈ. ಕಳಸಣ್ಣವರ, ಖಜಾಂಜಿ ಯೋಗೇಶ ಬಡಿಗೇರ, ಮುಂಡರಗಿ ತಾಲೂಕಾಧ್ಯಕ್ಷ ಬಸವರಾಜ ಪೊಲೂರ, ಶಿರಹಟ್ಟಿ ತಾಲೂಕಾಧ್ಯಕ್ಷ ನಾಗರಾಜ ಚೋಳಮ್ಮನವರ, ಲಕ್ಷೇಶ್ವರ ತಾಲೂಕಾಧ್ಯಕ್ಷ ಡಿ.ಎಸ್. ಕುಲಕರ್ಣಿ, ಗದಗ ತಾಲೂಕಾಧ್ಯಕ್ಷ ಸಂತೋಷ ಜಾಧವ, ರೋಣದ ಶಂಕರಗೌಡ ಗಿರಿಯಪ್ಪಗೌಡರ, ಗಜೇಂದ್ರಗಡದ ಉಮೇಶ ಅರಳಿಗಿಡದ, ನರಗುಂದ ಅನಿಲಕುಮಾರ ಭೋವಿ ಸೇರಿ ಜಿಲ್ಲೆಯ ಎಲ್ಲ ಗ್ರಾಮ ಆಡಳಿತ ಅಧಿಕಾರಿಗಳು ಪಾಲ್ಗೊಂಡಿದ್ದರು.



ಬೆಳೆ ಸಮೀಕ್ಷೆ, ಬೆಳೆ ಹಾನಿ ಪರಿಹಾರದ ಕೆಲಸವನ್ನು ಕೃಷಿ, ತೋಟಗಾರಿಕೆ ಇಲಾಖೆಗೆ ನಿರ್ವಹಿಸುವಂತೆ ಆದೇಶಿಸಬೇಕು. ಮ್ಯೂಟೇಶನ್ ಅವಧಿ ದಿನವನ್ನು ವಿಸ್ತರಿಸಬೇಕು. ಪ್ರೋಟೋಕಾಲ್ ಕೆಲಸದಿಂದ ಗ್ರಾಮ ಆಡಳಿತ ಅಧಿಕಾರಿಗಳನ್ನು ಕೈಬಿಡಬೇಕು. ಜಾಬ್ ಚಾರ್ಟ್ ನಿಗದಿಪಡಿಸಬೇಕು. ದಫ್ತರ್ ಹಾಗೂ ಜಮಾಬಂದಿಯನ್ನು ರದ್ದುಪಡಿಸಬೇಕು ಹಾಗೂ ರಾಜ್ಯದ ಗ್ರಾಮ ಸಹಾಯಕರಿಗೆ ಸೇವಾಭದ್ರತೆಯನ್ನು ಒದಗಿಸಬೇಕು ಎಂದು ಮನವಿ ಮಾಡಿಕೊಂಡರು.

---

# ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರದಿಂದ ಹಂತಹಂತವಾಗಿ ಅನುದಾನ ಮಂಜೂರಿ ಮಾಡಿದರೆ ಕ್ಷೇತ್ರದಲ್ಲಿ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ ನೀಡಿ ಅಭಿವೃದ್ಧಿಪಡಿಸಲಾಗುವದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ತಾಲೂಕಿನ ಹರದಗಟ್ಟಿ ತಾಂಡಾದ ಪರಿಶಿಷ್ಟ ಕಾಲೋನಿಯಲ್ಲಿ 2024-25ನೇ ಸಾಲಿನ ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಅಂದಾಜು 50 ಲಕ್ಷ ರೂ ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೇರವೇರಿಸಿ ಮಾತನಾಡಿದರು.

ಹರದಗಟ್ಟಿ ಗ್ರಾಮದ ಅಭಿವೃದ್ಧಿ ಕಾಮಗಾರಿಗಳಿಗೆ ಬೇಡಿಕೆ ಇದ್ದು, ಗ್ರಾಮದ ಜನರ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸಲಾಗುವದು. ಸರಕಾರದಿಂದ ಅನುದಾನ ತಂದು ಕ್ಷೇತ್ರವನ್ನು ಅಭಿವೃದ್ಧಿಪಡಿಸುತ್ತೇನೆ. ಗುತ್ತಿಗೆದಾರರು ಕಾಮಗಾರಿಯನ್ನು ಗುಣಮಟ್ಟದಲ್ಲಿ ನಿರ್ಮಿಸಬೇಕು, ಗ್ರಾಮದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.



ಈ ಸಂದರ್ಭದಲ್ಲಿ ಆದರಹಳ್ಳಿ ಗವಿಮಠದ ಮಹಾತಪಸ್ವಿ ಡಾ.ಕುಮಾರ ಮಹಾರಾಜರು, ಅಡರಕಟ್ಟಿ ಗ್ರಾ.ಪಂ ಅಧ್ಯಕ್ಷೆ ಪ್ರೇಮವ್ವ ನಾಯಕ, ಥಾವರಪ್ಪ ಲಮಾಣಿ, ದೇವಪ್ಪ ಲಮಾಣಿ, ಸೋಮು ಲಮಾಣಿ, ಚಂದ್ರಕಾಂತ ಲಮಾಣಿ, ಶಿವು ನಾಯಕ, ಮಾನಪ್ಪ ನಾಯಕ, ಶಂಕರ ಕಾರಬಾರಿ, ಸುರೇಶ ಲಮಾಣಿ, ಗೋವಿಂದಪ್ಪ ತಳವಾರ, ಅಶೋಕ ಚವಾಣ್, ರಮೇಶ ಲಮಾಣಿ, ಸಂತೋಷ ಪೂಜಾರ, ರವಿ ಲಮಾಣಿ, ಗ್ರಾ.ಪಂ ಸದಸ್ಯರು, ಗ್ರಾಮಸ್ಥರು ಇದ್ದರು.

---

# ಅಂಜುಮನ್ ಪಾಲಿಟೆಕ್ನಿಕ್‌ನಲ್ಲಿ ರಕ್ತದಾನ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಪ್ರತಿಷ್ಠಿತ ತಾಂತ್ರಿಕ ಶಿಕ್ಷಣ ಸಂಸ್ಥೆಯಾದ ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್‌ನಲ್ಲಿ ಐ.ಎಮ್.ಎ, ರಕ್ತ ಭಂಡಾರ ಗದಗ ಮತ್ತು ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್‌ನ ವಿಶೇಷ ಎನ. ಎಸ್.ಎಸ್. ಶಿಬಿರದ ಸಂಯುಕ್ತ ಆಶ್ರಯದಲ್ಲಿ ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು.

ರಕ್ತದಾನದಿಂದ ಆಗುವ ಲಾಭಗಳನ್ನು ಗದುಗಿನ ಖ್ಯಾತ ವೈದ್ಯರಾದ ಡಾ. ಪವಾಡ ಶೆಟ್ಟರ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೆ.ಎನ್. ರೇವಣಕರ ವಹಿಸಿದ್ದರು. ಆರ್.ಸಿ. ಕೋಟಿ, ಎಲ್.ಎಸ್. ಪಾಟೀಲ್, ಜೆ.ಎಸ್. ಕುಕನೂರ, ತಬಸ್ಸುಮ ಸವಣೂರ, ಎಮ್.ಜಿ. ವಾಯ್ ಮುಲ್ಲಾ, ಎಸ್.ಎಮ್. ಬಿಜಾಪೂರ, ಎಂ.ಜೆ. ಹೀರೆಹಾಳ, ಜಾಕೀರ ತಂಬಾಕದ, ಐ.ಎಮ್.ಎ ರಕ್ತ ಭಂಡಾರ ಸಿಬ್ಬಂದಿಗಳಾದ ಕಿರಣಕುಮಾರ ಬಾರಕೇರ, ಅನಿಲ್ ಕುಮಾರ, ಇಸ್ಮಾಯಿಲ್, ಅಕ್ಷತಾ, ಸಾಹೀಲ್ ಮುಲ್ಲಾ, ರಾಘವೇಂದ್ರ, ಶರಣು ಉಪಸ್ಥಿತಿರಿದ್ದರು.

ಎನ್‌ಎಸ್‌ಎಸ್ ಶಿಬಿರದ ನಿರ್ದೇಶಕರಾದ ಕುಮಾರಸ್ವಾಮಿ ಹಿರೇಮಠ, ಶಿಬಿರಾಧಿಕಾರಿಗಳಾದ ಆರ್.ಎಸ್. ಲಾಯದಗುಂದಿ, ಸಹ ಶಿಬಿರಾಧಿಕಾರಿ ಜಹೀರ ಕಮಾನಗಾರ, ಜಿ.ಎನ್. ಕಬಾಡಿ ಮುಂತಾದವರಿದ್ದರು.



---

ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ಸಮನ್ವಯಕಾರ ಗುರುಪ್ರಸಾದಗೌಡ ಮಾಹಿತಿ

# ಫೆ.13ಕ್ಕೆ ಜಿಲ್ಲಾ ಮಟ್ಟದ ಮಂದಿರ ಅಧಿವೇಶನ




■ವಿಜಯಸಾಕ್ಷಿ ಸುದ್ದಿ, ಗದಗ

ಅನಾದಿ ಕಾಲದಿಂದಲೂ ನಮ್ಮ ರಾಜ-ಮಹಾರಾಜರು ಸನಾತನ ಹಿಂದೂ ಧರ್ಮದ ರಕ್ಷಣೆಗಾಗಿ ಮತ್ತು ಸಂವರ್ಧನೆಗಾಗಿ ಅತ್ಯಂತ ಶ್ರೇಷ್ಠವಾದ ಸಾವಿರಾರು ದೇವಸ್ಥಾನಗಳನ್ನು ನಿರ್ಮಾಣ ಮಾಡಿದರು. ಈ ದೇವಸ್ಥಾನಗಳ ಮಾಧ್ಯಮದಿಂದ ನಡೆಯುತ್ತಿದ್ದ ಗುರುಕುಲ, ವೇದ ಪಾಠಶಾಲೆ, ಗೋಶಾಲೆಗಳ ಮೂಲಕ ರಾಷ್ಟ್ರಧರ್ಮ ಮತ್ತು ಸಂಸ್ಕೃತಿಯ ಪ್ರಚಾರ ಕಾರ್ಯವು ವ್ಯಾಪಕವಾಗಿ ನಡೆಯುತ್ತಿತ್ತು. ಆದರೆ ಪಾಶ್ಚಿಮಾತ್ಯ ಶಿಕ್ಷಣ ಮತ್ತು ಜಾತ್ಯಾತೀತ ವ್ಯವಸ್ಥೆಯ ಪ್ರಭಾವದಿಂದ ನಮ್ಮ ದೇವಸ್ಥಾನಗಳ ಸ್ಥಾಪನೆಯ ಮೂಲ ಉದ್ದೇಶವೂ ಅರ್ಥವನ್ನು ಕಳೆದುಕೊಳ್ಳಲು ಪ್ರಾರಂಭವಾಯಿತು ಎಂದು ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ಸಮನ್ವಯಕರಾದ ಗುರುಪ್ರಸಾದಗೌಡ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಹಿಂದೂ ಧರ್ಮದ ಆಧಾರ ಸ್ಥಂಭವಾದ ದೇವಸ್ಥಾನಗಳನ್ನು ಸಂರಕ್ಷಣೆ ಮಾಡುವ ಉದ್ದೇಶದಿಂದ ಹಿಂದೂ ಜನಜಾಗೃತಿ ಸಮಿತಿಯು 2016ರಲ್ಲಿ ಮಂದಿರ ಮಹಾ ಸಂಘವನ್ನು ಪ್ರಾರಂಭ ಮಾಡಿದ್ದು, ಈ ಮಹಾಸಂಘದ ಮಾಧ್ಯಮದಿಂದ ಕಳೆದ 9 ವರ್ಷಗಳಿಂದ ನಿರಂತರವಾಗಿ ದೇವಸ್ಥಾನ ಸಂರಕ್ಷಣೆ ದೃಷ್ಟಿಯಿಂದ ಅನೇಕ ಯಶಸ್ವಿ ಅಭಿಯಾನಗಳನ್ನು ನಡೆಸಲಾಗುತ್ತಿದೆ. ಕಳೆದ 2 ವರ್ಷಗಳಿಂದ ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳಲ್ಲಿ ದೇವಸ್ಥಾನ ವಿಶ್ವಸ್ಥರು, ಪುರೋಹಿತರು ಮತ್ತು ಈ ಕ್ಷೇತ್ರದಲ್ಲಿ ಕಾರ್ಯ ಮಾಡುವ ವಕೀಲರನ್ನು ಸೇರಿಸಿ ರಾಜ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಮಂದಿರ ಅಧಿವೇಶನವನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ಅಧಿವೇಶನದ ಮಾಧ್ಯಮದಿಂದ ದೇವಸ್ಥಾನಗಳ ವ್ಯಾಪಕ ಸಂಘಟನೆ, ಧಾರ್ಮಿಕ ಶಿಕ್ಷಣವನ್ನು ನೀಡುವುದು, ಸಾಮೂಹಿಕ ಆರತಿ, ವಸ್ತ್ರ ಸಂಹಿತೆ ಜಾರಿ ಮಾಡುವುದು, ಅನ್ಯಾಯಗಳನ್ನು ತಡೆಗಟ್ಟಲು ನಿರಂತರವಾಗಿ ಪ್ರಯತ್ನವನ್ನು ಮಾಡಲಾಗುತ್ತಿದೆ. ಇದೇ ಉದ್ದೇಶದಿಂದ ಫೆಬ್ರವರಿ 13ರ ಬೆಳಿಗ್ಗೆ 10 ಗಂಟೆಗೆ ಗದುಗಿನ ಲಕ್ಷ್ಮಣ ನಗರದ ಶ್ರೀ ಕನಕ ಭವನದಲ್ಲಿ ಜಿಲ್ಲಾ ಮಟ್ಟದ ಮಂದಿರ ಅಧಿವೇಶನವನ್ನು ಆಯೋಜನೆ ಮಾಡಲಾಗಿದೆ. ಈ ಅಧಿವೇಶನದಲ್ಲಿ ಗದಗ ಜಿಲ್ಲೆಯ ಎಲ್ಲಾ ತಾಲೂಕು ಮತ್ತು ಧಾರವಾಡ ಜಿಲ್ಲೆಯ ಕೆಲವು ತಾಲೂಕುಗಳಿಂದ 300ಕ್ಕೂ ಹೆಚ್ಚು ದೇವಸ್ಥಾನ ವಿಶ್ವಸ್ಥರು ಮತ್ತು ಪುರೋಹಿತರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ಅಧಿವೇಶನದಲ್ಲಿ ದೇವಸ್ಥಾನಗಳ ಮೂಲಕ ವ್ಯಾಪಕ ಧರ್ಮಪ್ರಚಾರ ಹೇಗೆ ಮಾಡುವುದು, ದೇವಸ್ಥಾನಗಳ ಸಂಘಟನೆಯ ಅವಶ್ಯಕತೆ, ಆದರ್ಶ ವ್ಯವಸ್ಥಾಪನೆ, ಕೆಲ ಸಂದರ್ಭದಲ್ಲಿ ಬರುವ ಕಾನೂನು ಅಡಚಣೆಗಳಿಗೆ ವಕೀಲರಿಂದ ಸೂಕ್ತ ಕಾನೂನು ಮಾರ್ಗದರ್ಶನ ಹೀಗೆ ಅನೇಕ ವಿಷಯಗಳ ಬಗ್ಗೆ ಈ ಕ್ಷೇತ್ರದಲ್ಲಿ ಕಾರ್ಯ ಮಾಡುವ ಅನೇಕ ಗಣ್ಯ ವಕ್ತಾರರು ಮಾರ್ಗದರ್ಶನ ಮಾಡಲಿದ್ದಾರೆ ಎಂದು ಗುರುಪ್ರಸಾದಗೌಡ ತಿಳಿಸಿದರು.

---

# ಕಾರ್ಮಿಕ ಕಲ್ಯಾಣ ಸಂಸ್ಥೆಯಿಂದ ಸಾಧಕ ಕಾರ್ಮಿಕರಿಗೆ ಪ್ರಶಸ್ತಿ ಪ್ರದಾನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕಾರ್ಮಿಕ ಕಲ್ಯಾಣ ಸಂಸ್ಥೆಯು ವಿಶ್ವ ಸಂಶೋಧಕರ ದಿನಾಚರಣೆ, ಸಾಧಕ ಕಾರ್ಮಿಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಫೆ. 11 ರಂದು ಮಂಗಳವಾರ ಸಂಜೆ 4-30 ಗಂಟೆಗೆ ಗದುಗಿನ ಹಳೇ ಕೋರ್ಟ್ ಬಳಿ ಇರುವ ಲಯನ್ಸ್ ಸಭಾಂಗಣದಲ್ಲಿ ಏರ್ಪಡಿಸಿದೆ.

ಗದುಗಿನ ಜ.ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಎಸ್.ಎಸ್.ಪಟ್ಟಣಶೆಟ್ಟರ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಗದಗ ತಾಲೂಕಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಸಂಸ್ಥೆಯ ನಿರ್ದೇಶಕ ಅಪ್ಪುರಾಜ ಭದ್ರಕಾಳಮ್ಮನಮಠ ಆಗಮಿಸುವರು.

ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಮಹ್ಮದ್ ಇರ್ಫಾನ್ ಡಂಬಳ ವಹಿಸುವರು. ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃರಾದ ಹನುಮಾನಸಿಂಗ್ ಜಮಾದಾರ ಎಲೆಕ್ಟ್ರಿಕಲ್ ಇಂಜನೀಯರ್ ರಾಜಣಸಾ ಪವಾರ ಅವರಿಗೆ ಸನ್ಮಾನವಿದೆ. ಸಾಧಕ ಕಾರ್ಮಿಕರಾದ ಮಲ್ಲಪ್ಪ ಅಂಗಡಿ, ಶಂಕ್ರಪ್ಪ ಕಮ್ಮಾರ, ಮಲ್ಲಪ್ಪ ಜೀವಣ್ಣವರ, ಮಾರುತಿ ಮೂಲಿಮನಿ, ರಫೀಕ್ ಅಂಗಡಿ, ಗಂಗಾಧರ ಚುಳಕಿ ಅವರಿಗೆ ವಿಶ್ವಕ್ಕೆ ಬೆಳಕು ನೀಡಿದ ಥಾಮಸ್ ಅಲ್ವಾ ಎಡಿಷನ್ ಜನ್ಮದಿನಾಚರಣೆಯ ಅಂಗವಾಗಿ ಪ್ರಶಸ್ತಿ ನೀಡಿ ಗೌರವಿಸಲಾಗುವದು ಎಂದು ಸಂಘಟಿಕರಾದ ನಾಶೀರ್‌ಸಾಬ ಚಿಕೇನಕೊಪ್ಪ ವಿನಂತಿಸಿದ್ದಾರೆ.

---

ಕೆ.ಎಚ್. ಪಾಟೀಲರ 33ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಚೆನ್ನವೀರ ಶ್ರೀಗಳ ಸಲಹೆ

# ಕೆ.ಎಚ್. ಪಾಟೀಲ ಹೆಸರಿನ ಸಹಕಾರ ವಿಶ್ವವಿದ್ಯಾಲಯ ಸ್ಥಾಪನೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಹಕಾರ ಕ್ಷೇತ್ರದಿಂದ ಮಾತ್ರ ಸಮ ಸಮಾಜ ನಿರ್ಮಾಣ ಸಾಧ್ಯ. ಈ ಕ್ಷೇತ್ರದ ಬಲಪಡಿಸಲು ಒಂದು ವಿಶ್ವವಿದ್ಯಾಲಯ ಸ್ಥಾಪಿಸಬೇಕು ಮತ್ತು ಅದಕ್ಕೆ ಪ್ರೇರಕ ಶಕ್ತಿಯಾಗಿರುವ ಕೆ.ಎಚ್. ಪಾಟೀಲರ ಹೆಸರನ್ನಿಡಬೇಕೆಂದು ಮುಳ್ಳಹಳ್ಳಿಯ ಶ್ರೀ ಚೆನ್ನವೀರೇಶ್ವರ ವಿರಕ್ತಮಠದ ಶ್ರೀ ಮ.ನಿ.ಪ್ರ ಶಿವಯೋಗಿ ಮಹಾಸ್ವಾಮಿಗಳು ಸರ್ಕಾರಕ್ಕೆ ಸಲಹೆ ಮಾಡಿದರು.

ಇಂದಿರಾ ಗಾಜಿನ ಮನೆ ಆವರಣದಲ್ಲಿ ಜರುಗಿದ ಕೆ.ಎಚ್. ಪಾಟೀಲರ 33ನೇ ಪುಣ್ಯಸ್ಮರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

ಕೆ.ಎಚ್. ಪಾಟೀಲರು ಸಹಕಾರಕ್ಕಾಗಿ ದುಡಿದರು ಸಹಕಾರಕ್ಕಾಗಿ ಶ್ರಮಿಸಿದರು. ಅವರ ಉಸಿರು ಸಹಕಾರವಾಗಿತ್ತು. ಹೀಗಾಗಿ ಅವರ ಹೆಸರನ್ನು ವಿಶ್ವವಿದ್ಯಾಯಕ್ಕೆ ಇಟ್ಟರೆ ಸೂಕ್ತ. ಸಹಕಾರಿಗಳ ಜೀವನ ಗಾಥೆ ಇಂದಿನ ಮುಂದಿನ ಪೀಳಿಗೆಗೆ ಪರಿಚಯಿಸುವುದರ ಜೊತೆಗೆ ಸಧೃಡ ಸುಂದರ ಸಮಾಜ, ಸಹಕಾರ ವಿಶ್ವವಿದ್ಯಾಲಯ ಸ್ಥಾಪನೆ ಅಗತ್ಯ. ಇದಕ್ಕೆ ಎಲ್ಲ ಚಿಂತಕರು, ಸಹಕಾರಿಗಳು ದನಿಗೂಡಿಸಿ ಸರಕಾರದ ಮೇಲೆ ಒತ್ತಡ ತರಬೇಕೆಂದು ಅವರು ಮನವಿ ಮಾಡಿಕೊಂಡರು.

ಕೆ.ಎಚ್. ಪಾಟೀಲರು ಧೈರ್ಯಶಾಲಿ ರಾಜಕಾರಣಿ, ನೇರ ನಡೆ-ನ್ಮಡಿಯ, ನಿರ್ಭೀತಿಯ ನಾಯಕ. ಇಂತಹ ನಾಯಕರಿದ್ದರೇ ಎಂದು ಆಶ್ಚರ್ಯಪಡುವಂತಾಗಿದೆ. ಸಹಕಾರ ಕ್ಷೇತ್ರ ಇಂದು ಅಳಿವಿನ ಅಂಚಿನಲ್ಲಿದೆ. ಎಲ್ಲ ಕ್ಷೇತ್ರಗಳಲ್ಲಿಯೂ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿದೆ. ಅದರಂತೆ ಈ ಕ್ಷೇತ್ರದ ಉಳಿವಿಗೆ, ಹೆಚ್ಚಿನ ಅಧ್ಯಯನಕ್ಕೆ ಒಂದು ಪ್ರತ್ಯೇಕ ಸಹಕಾರ ವಿಶ್ವವಿದ್ಯಾಲಯ ಸ್ಥಾಪನೆ ಅಗತ್ಯವಾಗಿದೆ. ಉತ್ತರ ಕರ್ನಾಟಕದ ಬೆಳವಣಿಗೆಯಲ್ಲಿ ಸಹಕಾರ ಕ್ಷೇತ್ರದ ಪಾತ್ರ ದೊಡ್ಡದಿದೆ. ಕೆ.ಎಚ್. ಪಾಟೀಲರು ತಮಗೆ ದೊರೆತ ರಾಜಕೀಯ ಅಧಿಕಾರವನ್ನು ಸಹಕಾರ ಸಂಸ್ಥೆಗಳನ್ನು ಕಟ್ಟಲು ಬಳಸಿ, ಶೋಷಣೆ ಮುಕ್ತ ಸಮಾಜ ನಿರ್ಮಿಸಲು ಜೀವಿತದ ಕೊನೆಯುಸಿರಿರುವವರೆಗೆ ಶ್ರಮಿಸಿದ್ದಾರೆ ಎಂದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಸಭೆಯ ಪೂಜ್ಯ ಮಹಾಪೌರಾದ ರಾಮಣ್ಣ ಬಡಿಗೇರ ಮಾತನಾಡಿ, ಕೆ.ಎಚ್. ಪಾಟೀಲರ ಸಾರ್ವಜನಿಕ ಜೀವನ ನಮಗೆಲ್ಲ ಮಾದರಿಯಾಗಿದೆ. ನಾನು ಎಚ್. ಕೆ. ಪಾಟೀಲರಲ್ಲಿ ಕೆ.ಎಚ್. ಪಾಟೀಲರನ್ನು ಕಾಣುತ್ತಿದ್ದೇನೆ ಎಂದರು.

ಕ್ರಿಶ್ಚಿಯನ್ ಧರ್ಮಗುರುಗಳಾದ ಶ್ರೀ ಮೈಯರ್ ಮೆಮೋರಿಯಲ್ ಫಾಸ್ಟರ್ ರೇವರೆಂಡ್ ರಾಜು ಮೇದಗೊಪ್ಪ, ಮುಸ್ಲಿಂ ಧರ್ಮಗುರುಗಳಾದ ಮೌಲಾನಾ ಝುಹರುದ್ಧಿನ ಖಾಜಿ ಮಾತನಾಡಿದರು. ಬುದ್ಧರಕ್ಕಿತ ಪ್ರೌಢಶಾಲೆಯ ವಿದ್ಯಾರ್ಥಿಗಳು ಹಾಗೂ ವಿಶ್ವಭಾರತಿ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಪ್ರಾರ್ಥನೆ ಸಲ್ಲಿಸಿದರು.

ಕೆ.ಎಚ್. ಪಾಟೀಲ ಪ್ರತಿಷ್ಠಾನದ ಅಧ್ಯಕ್ಷ ಎ.ಎಂ. ಹಿಂಡಸಗೇರಿ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಸಂಸದ ಪ್ರೊ. ಐ.ಜಿ. ಸನದಿ ಹಾಗೂ ಮಾಜಿ ಶಾಸಕ ಮಲ್ಲಿಕಾರ್ಜುನ ಅಕ್ಕಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಆರಂಭದಲ್ಲಿ ವಿಶ್ವಬಾರತಿ ವಿದ್ಯಾರ್ಥಿನಿಯರು ವೇಮನ ಗೀತೆ ಹಾಡಿದರು. ಎಫ್. ಎಚ್. ಜಕ್ಕಪ್ಪನವರು ಸ್ವಾಗತಿಸಿದರು. ಮಹೇಂದ್ರ ಸಿಂಘಿ ಅತಿಥಿಗಳ ಪರಿಚಯ ಮಾಡಿದರು. ಸದಾನಂದ ಡಂಗನವರ ವಂದಿಸಿದರು. ವೇಮನ ವಿದ್ಯಾವರ್ಧಕ ಸಂಘದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ, ಅಂಜುಮನ್ ಇಸ್ಲಾಂ ಸಂಸ್ಥೆಯ ವಿದ್ಯಾರ್ಥಿಗಳು, ಹಾಗೂ ಬುದ್ಧರಕ್ಕಿತ ಸಂಸ್ಥೆಯ ವಿದ್ಯಾರ್ಥಿಗಳು, ಪ್ರಿನ್ಸಿಪಾಲ್ ಎಸ್.ಬಿ. ಸಣಗೌಡರ ಕಾರ್ಯಕ್ರಮ ನಿರೂಪಿಸಿದರು.

ಸಮಾರಭಂದಲ್ಲಿ ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ ಸನದಿ, ಪ್ರತಿಷ್ಠಾನದ ಪ್ರಧಾನ ಕಾರ್ಯದರ್ಶಿ ಎಂ.ಎಂ. ಗೌಡರ, ಧಾರವಾಡ ಜಿಲ್ಲಾ ಗ್ಯಾರಂಟಿ ಸಮಿತಿಗಳ ಅಧ್ಯಕ್ಷ ಎಸ್.ಆರ್. ಪಾಟೀಲ. ಕೃಷಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಅಧ್ಯಕ್ಷ ಡಾ. ವಾಯ್.ಬಿ. ಪಾಟೀಲ, ವೇಮನ ವಿದ್ಯಾವರ್ಧಕ ಸಂಘದ ಗೌರವ ಕಾರ್ಯದರ್ಶಿ ಆರ್.ಕೆ. ಪಾಟೀಲ, ಮಹೇಶ ಪಾಟೀಲ, ಕಾನೂನು ವಿ.ವಿ. ಸಿಂಡಿಕೇಟ್ ಸದಸ್ಯ ಪ್ರೊ. ಎಚ್.ವಿ. ಬೆಳಗಲಿ, ಡಾ. ಗೋವಿಂದ ಮಣ್ಣೂರ, ಡಿ.ಎಂ. ದೊಡಮನಿ, ಮಂಜುನಾಥ ಮುದರಡ್ಡಿ, ಮೋಹನ ಹಿರೇಮನಿ, ಈಶ್ವರ ಸಿರಸಂಗಿ, ಮನೋಜ ಪಾಟೀಲ, ಎ.ಡಿ. ಹೆಬ್ಬಳ್ಳಿ, ಬಿ.ಕೆ. ಲಕ್ಕಣ್ಣವರ, ಅಶೋಕ ಇಟಗಿ, ವೆಂಕಣ್ಣಾ ಕಿರೇಸೂರ, ಕೆ.ವಿ. ಹುಲಕೋಟಿ, ನವೀದ ಮುಲ್ಲಾ, ವ್ಹಿ.ಎಚ್. ಶಿರೋಳ, ಪ್ರೊ. ಜಿ.ಬಿ. ಕಲಕೋಟಿ, ಡಾ. ಉದುಪುಡಿ, ರಘು ಕೆಂಪಲಿಂಗನಗೌಡರ, ಮೋಹನ ಕಲಾಲ, ಬಲವಂತ ಗುಂಡಮಿ, ವಿಜಯ ಲಕ್ಷ್ಮೇಶ್ವರ, ಕೃಷ್ಣಪ್ಪಾ ಲಕ್ಕಣ್ಣವರ, ಡಾ. ಆರ್.ವಾಯ್. ಹೊಸಮನಿ, ಗಂಗಾಧರ ದೊಡವಾಡ, ಶಿವಪ್ಪ ಮಸ್ಕಿ, ಪಾರಸಮಲ್ ಜೈನ, ಅಶೋಕ ಸೋಮಾಪುರ, ಗಿರಿಮಲ್ಲಪ್ಪ ಮತ್ತಿಕಟ್ಟಿ, ಗೋಪಣ್ಣ ನಲವಡಿ, ಹಾಸಿಂ ಹಿಂಡಸಗೇರಿ, ಉದಯ ಹೊಸಮನಿ, ಎಚ್. ಎಚ್. ಕಿರೇಸೂರ, ಬಸವರಾಜ ರಾಜೂರ, ಮಹೇಶ ಹೆಬ್ಬಾಳ, ಬಸವರಾಜ ಹೊಂಬಳ, ಬಸವರಾಜ ಕಳಕರಡ್ಡಿ, ಉಪಸ್ಥಿತರಿದ್ದರು.



ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಪ್ರಸಾದ ಅಬ್ಬಯ್ಯ ಮಾತನಾಡಿ, ಕೆ.ಎಚ್. ಪಾಟೀಲರು ನೇರ ನುಡಿಯ ನಿರ್ಭಿಡೆಯ ನಾಯಕರಾಗಿದ್ದರು. ಎಚ್.ಕೆ. ಪಾಟೀಲರು ಸೌಮ್ಯವಾದಿಗಳು. ಆದರೆ ಇಬ್ಬರೂ ನಾಯಕರು ರಾಜ್ಯವಷ್ಟೇ ಅಲ್ಲ, ರಾಷ್ಟ್ರದ ಆಸ್ತಿಯಾಗಿದ್ದಾರೆ. ಇವರ ಜೊತೆಗೆ ಡಿ.ಆರ್. ಪಾಟೀಲರು ಸೇರಿದ್ದು ಮೂವರು ನಾಯಕರು ಮಹಾತ್ಮ ಗಾಂಧೀಜಿಯವರ ತತ್ವಗಳಲ್ಲಿ ನಂಬಿಕೆ ಇಟ್ಟು ಸಾರ್ವಜನಿಕ ಜೀವನದಲ್ಲಿ ಸೇವೆ ಸಲ್ಲಿಸಿದವರು ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka